MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ “ಇದು ರಾಷ್ಟ್ರದ ಧ್ವನಿ”

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 ಸಂಚಿಕೆ: 69 ಬುಧವಾರ : 31–12–2025 ರಾಯಚೂರು RNI NO: KARKAN/2022/90446 ಪುಟ: 4 ಬೆಲೆ: ರೂ: 2–00

VOLUME: 05 ISSUE: 69 WEDNESDAY : 31–12–2025 RAICHUR EMAIL: YUVAMARGA@GMAIL.COM PAGE: 4 PRICE: Rs: 2-00

## ಶಿಕ್ಷಕರ ಕ್ಷೇತ್ರದ ಮತದಾರರು ಹೆಸರನ್ನು ಪರಿಶೀಲಿಸಿಕೊಳ್ಳಿ: ಎಡಿಸಿ ಶಿವಾನಂದ

ಯುವಮಾರ್ಗ ಸುದ್ದಿ



**ರಾಯಚೂರು ಡಿ,30–** ಭಾರತ ಚುನಾವಣಾ ಆಂಯೋಗದ ಸೂಚನೆಯಂತೆ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಹೆಸರನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ ಸೇರಿದಂತೆ ಆಯಾ ತಹಶೀಲ್ದಾರ್ ಕಚೇರಿ, ಮಹಾನಗರ ಪಾಲಿಕೆಯ ಕಾರ್ಯಾಲಯದಲ್ಲಿ ಪರಿಶೀಲಿಸಿಕೊಳ್ಳಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಡಿಸೆಂಬರ್ 30ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಗೆ ಸಂಬಂಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಕುಲಬುರಗಿ ಮತ್ತು ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತರು, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು ಹಾಗೂ **(2ನೇ ಪುಟಕ್ಕೆ>>>)**

# ಅಕ್ರಮ ವಾಸಿಗಳಿಗೆ ಮನೆ ಭಾಗ್ಯ

## ಸರ್ಕಾರದ ವಿರುದ್ಧ ಸಾರ್ವಜನಿಕರ ಆಕ್ರೋಶ

**ಬೆಂಗಳೂರು,ಡಿ.30–** ರಾಜಧಾನಿ ಬೆಂಗಳೂರಿನ ಕೋಗಿಲು ಲೇಔಟ್‌ನಲ್ಲಿ ಕಾನೂನು ಬಾಹಿರವಾಗಿ ಮನೆಗಳನ್ನು ನಿರ್ಮಾಣ ಮಾಡಿಕೊಂಡವರಿಗೆ ಸರ್ಕಾರ ಹೊಸದಾಗಿ ಮನೆಗಳನ್ನು ನಿರ್ಮಿಸಿ ಕೊಡಲು ಮುಂದಾಗಿರುವುದಕ್ಕೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೊಶ ವ್ಯಕ್ತವಾಗಿದೆ. ಸರ್ಕಾರಿ ಜಾಗದಲ್ಲಿ ನಿವೇಶನ ಮಾಡಿ ಮನೆಗಳನ್ನು ಕಟ್ಟಿಕೊಂಡಿರುವುದೇ ಕಾನೂನು ಉಲ್ಲಂಘನೆ. ವಾಸ್ತವತೆ ಹೀಗಿರುವಾಗ ಸರ್ಕಾರ ಅವರಿಗೆ ಯಾವ ಅರ್ಹತೆಯ ಮೇಲೆ ಹೊಸದಾಗಿ ಮನೆಗಳನ್ನು ನಿರ್ಮಿಸಿ ಕೊಡುತ್ತದೆ ಎಂದು ಸಾರ್ವಜನಿಕರು ಪ್ರಶ್ನೆ ಮಾಡುತ್ತಿದ್ದಾರೆ.

ಈ ಹಿಂದೆ ಬೆಂಗಳೂರು, ಮೈಸೂರು, ತುಮಕೂರು, ಶಿವಮೊಗ್ಗ, ದಾವಣಗೆರೆ, ಚಿಕ್ಕಮಗಳೂರು,



ಬೆಳಗಾವಿ ಸೇರಿದಂತೆ ನಾನಾ ಕಡೆ ಸರ್ಕಾರಿ ಜಾಗದಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಂಡಾಗ ಕನಿಷ್ಠ ಪಕ್ಷ ಅವರಿಗೆ ಒಂದೇ ಒಂದು ನೋಟಿಸ್ ಕೂಡ ಕೊಡದೆ ರಾತ್ರೊರಾತ್ರಿ ತೆರವುಗೊಳಿಸಿ ಎತ್ತಂಗಡಿ ಮಾಡಲಾಗಿತು. ಅಂದು ಯಾವ ಸರ್ಕಾರವು ಸಂತ್ರಸ್ತರಿಗೆ ಸಹಾನುಭೂತಿ, ಅನುಕಂಪ, ಇಲ್ಲವೇ ಮಾನವೀಯತೆ ತೋರದೆ ನಿರ್ದಾಕ್ಷಣ್ಯವಾಗಿ ಮಕ್ಕಳು, ಹಿರಿಯರು ಮಹಿಳೆಯರು ಎನ್ನದೆ ಎಲ್ಲರನ್ನೂ ಬೀದಿಗೆ ಹಾಕಿತ್ತು.

ಮನೆ ಕಳೆದುಕೊಂಡ ಸಂತ್ರಸ್ಥರು ಅಂದು ಸಾತ್ವಿಕವಾಗಿ ಸರ್ಕಾರ ಮತ್ತು ಸ್ಥಳೀಯ ಆಡಳಿತದ ವಿರುದ್ಧ ಜನರು ಆಕ್ರೊ?ಶ ವ್ಯಕ್ತಪಡಿಸಿದರೆ ವಿನಃ ಆಕಾಶಭೂಮಿ ಒಂದಾಗುವಂತೆ ಹಾದಿ–ಬೀದಿಯಲ್ಲಿ ರಂಪಾಟ ಮಾಡಿರಲಿಲ್ಲ. ಕೋಗಿಲು ಪ್ರದೇಶದ ಸರ್ಕಾರಿ ಜಾಗದಲ್ಲಿ ಮನೆ ನಿರ್ಮಿಸಿಕೊಂಡಿದ್ದೇ ಕಾನೂನುಬಾಹಿರವಾಗಿರುವಾಗ ಸಂತ್ರಸ್ತರಿಗೆ ಮನೆ ನಿರ್ಮಾಣ ಮಾಡಿಕೊಡುವುದು ಎಷ್ಟರಮಟ್ಟಿಗೆ ಸರಿ ? ಎಂಬ ಮೂಲಭೂತ ಪ್ರಶ್ನೆಯನ್ನು ಎತ್ತುತ್ತಿದ್ದಾರೆ.

ಒಂದು ವೇಳೆ ಇವರು ಕಾನುನುಬದ್ಧವಾಗಿ ನಿವೇಶನಗಳನ್ನು ಖರೀದಿಸಿ **(2ನೇ ಪುಟಕ್ಕೆ>>>)**

## ಉಚಿತ ಮಹಿಳಾ ಕ್ಷೇಮಾ ತಪಾಸಣೆ ಶಿಬಿರಕ್ಕೆ ಗ್ರಾ.ಪಂ ಅಧ್ಯಕ್ಷ ನೀಲಕಂಠಪ್ಪ ಚಾಲನೆ

ಯುವಮಾರ್ಗ ಸುದ್ದಿ




**ಮಸ್ಕಿ,ಡಿ.30–** ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಬಳಗಾನೂರು ವ್ಯಾಪ್ತಿಯ ಉದ್ಬಾಳ ಗ್ರಾಮದಲ್ಲಿ ಪಿಪಿಎಚ್‌ಎಫ್, ಪ್ರಣಾ ಯೋಜನೆ ,ಜಿಇ ಹೆಲ್ತ್‌ಕೇರ್ ಸಂಯುಕ್ತಾಶ್ರಯದಲ್ಲಿ ಜಂಟಿಯಾಗಿ ಉಚಿತ ಮಹಿಳಾ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಬಾಳ ಗ್ರಾ.ಪಂ ಅಧ್ಯಕ್ಷರು ನೀಲಕಂಠಪ್ಪ ಉದ್ಘಾಟಿಸಿದರು.

ನಂತರ ಪ್ರಾಥಮಿಕ ಆರೋಗ್ಯ ಕೇಂದ್ರ ಬಳಗನೂರು ವೈದ್ಯಕೀಯ ಅಧಿಕಾರಿ ಡಾ.ದೌವಲಸಾಬ್ ಮಾತನಾಡಿ ಪ್ರತಿಯೊಂದ ಮನೆಯಲ್ಲಿ ಬಿಪಿ ಶುಗರ್ ಕಾಯಿಲೆವಿರುವ ಜನವರುವ ಈ ದಿನದಲ್ಲಿ ಅಸಾಂಕ್ರಿಮಿಕ ಕಾಯಿಲೆಗಳು ಬರುವ ಮುನ್ನ ನಿಯಮಿತ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳು ಒಂದೇ ಸೂರಿನಡಿ ಗ್ರಾಮದ ಮಹಿಳೆಯರಿಗೆ ಆರೋಗ್ಯ ತಪಾಸಣೆ ಮಾಡಿಸುವ ಉದ್ದೇಶದಿಂದ ಗರ್ಭಗಂಠ ಕ್ಯಾನ್ಸರ್ ಹಾಗೂ ಸ್ತನ ಕ್ಯಾನ್ಸರ್ ಅಧಿಕ ರಕ್ತದ ಒತ್ತಡ ಎತ್ತರ ತೂಕ ಹಾಗೂ ಬಿಪಿ ಶುಗರ್ ತಪಾಸಣೆ, ಕಣ್ಣು ತಪಾಸಣೆ, ಬಾಯಿ ಮತ್ತು ಹಲ್ಲು ತಪಾಸಣೆ, ಆರ್‌ಎಫ್‌ಟಿ ಎಲ್‌ಎಫ್‌ಟಿ ಪರೀಕ್ಷೆ ಮತ್ತು ಪೌಷ್ಟಿಕ ಆಹಾರ ಸೇವನೆ ಕುರಿತು ಗ್ರಾಮೀಣ ಜನರಿಗೆ ಆರ್ಥಿಕ ವೆಚ್ಚ ತಗ್ಗಿಸುವ ಸಲುವಾಗಿ ಉಚಿತವಾಗಿ ಮಾನಸಿಕ ಆರೋಗ್ಯದ ಬಗ್ಗೆ ಮಾಹಿತಿ ಮತ್ತು ಆಪ್ತ ಸಮಾಲೋಚನೆಯನ್ನ ಪೀಪಲ್ ಟು ಪೀಪಲ್ ಹೆಲ್ತ್ ಫೌಂಡೇಶನ್ ಜಿ ಇ ಹೆಲ್ತ್ ಕೇರ್ ಸಂಸ್ಥೆಯವರು ತಜ್ಞರಿಂದ **(2ನೇ ಪುಟಕ್ಕೆ>>>)**

## ಐತಿಹಾಸಿಕ ಅಂಬಾ ಮಹೋತ್ಸವ–2026ರಲ್ಲಿ ರಾಜ್ಯದ ಸಿಎಂ, ಡಿಸಿಎಂ, ಸಚಿವರು, ಗಣ್ಯರು ಭಾಗಿ: ಶಾಸಕ ಹಂಪನಗೌಡ ಬಾದರ್ಲಿ

ಯುವಮಾರ್ಗ ಸುದ್ದಿ



**ರಾಯಚೂರು ಡಿ,30–** ಭಕ್ತಿ–ಶಕ್ತಿ ಪರಂಪರೆಯ ದಿವ್ಯ ಸಂಗಮ ಸಿಂಧನೂರ ತಾಲೂಕಿನ ಸೋಮಲಾಪುರದ ಅಂಬಾಮಠದ ಅಂಬಾ ಮಹೋತ್ಸವ 2026ರ ಕಾರ್ಯಕ್ರಮವು ಜನವರಿ 2ರಿಂದ ಜನವರಿ 6ರವರೆಗೆ ನಿಗದಿಯಾಗಿದ್ದು, ಜನವರಿ 3ರಂದು ನಡೆಯಲಿರುವ ಅಂಬಾ ದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಹಾಗೂ ವಿವಿಧ ಇಲಾಖೆಗಳ ಸಚಿವರು, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳ ಸಂಸದರು, ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಮತ್ತು ಇನ್ನಿತರ ಗಣ್ಯರು ಭಾಗಿಯಾಗಲಿದ್ದಾರೆ ಎಂದು ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಹೇಳಿದರು.

ಸಿಂಧನೂರ ನಗರದ ಕಾಕತಿಯ ಕ್ಲಬ್ ಆವರಣದಲ್ಲಿ ಡಿಸೆಂಬರ್ 30ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಜನವರಿ 03ರಂದು ಮಧ್ಯಾಹ್ನ 2 ಗಂಟೆಗೆ ಸಿಂಧನೂರು ನಗರಕ್ಕೆ ಆಗಮಿಸುವರು. ಅಂದು ಸಿಂಧನೂರ ನಗರದಲ್ಲಿ ಮಧ್ಯಾಹ್ನ 2 ರಿಂದ 2:30ರವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಮಧ್ಯಾಹ್ನ ಭೋಜನದ ವಿರಾಮದ ನಂತರ 3:30 ರಿಂದ ಅಂಬಾಮಠಕ್ಕೆ ತೆರಳಿ ಸಂಜೆ 4 ಗಂಟೆಗೆ, ಸಿಂಧನೂರ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 400 ಕೋಟಿ ರೂ.ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಮಾಡಲಿದ್ದಾರೆ. ಸಂಜೆ 5 ಗಂಟೆಗೆ ಅಂಬಾದೇವಿ ಮಹಾ ರಥೋತ್ಸವ ಮತ್ತು ಜಂಬೂಸವಾರಿಗೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಅಂಬಾಮಠವು 400 ವರ್ಷಗಳ ಇತಿಹಾಸ ಹೊಂದಿದ್ದು, ತೆಲಂಗಾಣ, ಮಹಾರಾಷ್ಟ್ರ ಆಂಧ್ರ ಸೇರಿದಂತೆ ಐದಾರು ರಾಜ್ಯಗಳ ಮತ್ತು ನಮ್ಮ ರಾಜ್ಯದ ಲಕ್ಷಾಂತರ ಭಕ್ತರು ಅಂಬಾಮಠದ ಜಾತ್ರೆಗೆ ಆಗಮಿಸುತ್ತಾರೆ. ಈ ವರ್ಷ ಮಹಾ ರಥೋತ್ಸವವು ಅದ್ದೂರಿಯಾಗಿ ನಡೆಯಲಿದೆ. ಅಂಬಾ ಮಹೋತ್ಸವ ನಿಮಿತ್ತ ಜನವರಿ 2ರಿಂದ 6ರವರೆಗೆ ಸರಿಗಮಪ ಖ್ಯಾತಿಯ ಗಾಯಕರು ಮತ್ತು ಇನ್ನಿತರ ಕಲಾವಿದರಿಂದ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಪ್ರಪ್ರಥಮ ಬಾರಿಗೆ ಜಂಬೂಸವಾರಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮ, ಹಾಸ್ಯ ಸಂಜೆ, ಅಹೋ ರಾತ್ರಿ ತತ್ವಪದ ಗಾಯನ, ಕಡುಬಿನ ಕಾಳಗ, ಸಂಗೀತ ಸಂಜೆ, ನಾಟಕ, ದೇವಿ ಪಲ್ಲಕ್ಕಿ ಉತ್ಸವ, ಜಾನಪದ ಜಾತ್ರೆ, ಕುಂಬೋತ್ಸವ, ತತ್ವಪದ ಗಾಯನ ಸೇರಿದಂತೆ ಅನೇಕ ಕಾರ್ಯಕ್ರಮಗಳು ನಡೆಯಲಿವೆ.

ಜಾತ್ರೆಗೆ ಆಗಮಿಸುವ **(2ನೇ ಪುಟಕ್ಕೆ>>>)**

## ರಸ್ತೆ ಅಪಘಾತದಲ್ಲಿ ನಿವೃತ್ತ ಉಪತಹಸೀಲ್ದಾರ್ ಸಿದ್ದಲಿಂಗಪ್ಪ ಮೃತಿ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.30–** ಪಟ್ಟಣದ ಮಾನ್ವಿ ಸಿಂಧನೂರು ರಸ್ತೆಯಲ್ಲಿ ಸೋಮವಾರ ರಾತ್ರಿ ದ್ವೀಚಕ್ರವಾಹನ ಸವಾರ ಹಾಗೂ ಪಾದಚಾರಿ ನಡುವೆ ನಡೆದ ಅಪಘಾತದಲ್ಲಿ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಜಯನಗರ ನಿವಾಸಿ ನಿವೃತ್ತ ಉಪತಹಸೀಲ್ದಾರ್ ಸಿದ್ದಲಿಂಗಪ್ಪ ವ.75 ವರ್ಷ ಇವರು ಗಂಭಿರವಾಗಿ ಗಾಯಗೊಂಡು ರಾಯ ಚೂರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು ಅರೋಪಿ ಬೈಕ್ ಸವಾರ ಯಾಸಿನ ಎನ್ನುವವರ ಮೇಲೆ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖಾಧಿಕಾರಿ ಎ.ಎಸ್.ಐ.ಶಿವಲಿಂಗಪ್ಪ ತನಿಖೆ ಕೈಗೊಂಡಿದ್ದಾರೆ.

## ಅಬಕಾರಿ ಇಲಾಖೆಯಿಂದ ಸಿಹೆಚ್ ಪೌಡರ್, ಕಲಬೆರೆಕೆ ಸೇಂದಿ ದುಷ್ಪರಿಣಾಮದ ಅರಿವು ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ರಾಯಚೂರು ಡಿ,30–** ಜಿಲ್ಲಾಡಳಿತ, ಅಬಕಾರಿ ಇಲಾಖೆ, ಪೋಲಿಸ್ ಇಲಾಖೆ ಮತ್ತು ಜಿಲ್ಲಾ ಆರೋಗ್ಯ ಇಲಾಖೆಯಿಂದ ನಗರದ ಯಕ್ಲಸ್‌ಪೂರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಡಿಸೆಂಬರ್ 29ರಂದು ಸಿಹೆಚ್ ಪೌಡರ್, ಕಲಬೆರೆಕೆ ಸೇಂದಿ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ನಡೆಯಿತು.

ಈ ವೇಳೆ ಮನೋರೋಗ ತಜ್ಞರಾದ ಡಾ.ಮನೋಹರ್ ಪತ್ತಾರ ಅವರು ಮಾತನಾಡಿ, ಸೇಂದಿ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಮನುಷ್ಯನ ದೇಹದ ಮೇಲೆ ದುಷ್ಪರಿಣಾಮಗಳಾಗಲಿವೆ. ತಲೆನೋವು, ನಿದ್ರಾಹೀನತೆ, ವಾಕರಿಕೆ, ನರದೌರ್ಬಲ್ಯ, ಅಸಹಜ ಹೃದಯ ಲಯಗಳ ಮತ್ತು ಆಂತರಿಕ ರಕ್ತಸ್ರಾವ ಹಾಗೂ ಕ್ಯಾನ್ಸರ್ ಮುಂತಾದ ಆರೋಗ್ಯ ಸಮಸ್ಯೆಗಳು ಹಾಗೂ ಚಿತ್ತಚಂಚಲತೆ, ಜ್ಞಾಪಕ ಶಕ್ತಿ ಕ್ಷಿಣಿಸುವುದು, ಖಿನ್ನತೆ ಹಾಗೂ ಅತ್ಮಹತ್ಯೆಯ ಆಲೋಚನೆಗಳು ಮುಂತಾದ ಮಾನಸಿಕ ಕಾಯಿಲೆಗಳು ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುತ್ತವೆ ಎಂದರು.

ಮಾದಕ ವಸ್ತುಗಳ ಸೇವನೆಯಿಂದ ಯುವಜನತೆಗೆ ದೂರ ಇರುವಂತೆಯು ಹಾಗೂ ಚಟಗಳಿಗೆ ಬಲಿಯಾದ ವ್ಯಕ್ತಿಗಳಿಗೆ ಸೂಕ್ತ ಚಿಕಿತ್ಸೆ ನೀಡಿ ಗುಣಪಡಿಸುವ ಅವಕಾಶಗಳಿದ್ದು, ಡಿ–ಆಡಿಕ್ಷನ್ ಸೆಂಟರ್‌ಗಳಲ್ಲಿ ಮಾದಕ ವಸ್ತು ವ್ಯಸನಿಗಳಿಗೆ ಚಿಕಿತ್ಸೆ ನೀಡಲಾಗುವುದು ಎಂದರು.

ಈ ವೇಳೆ ರಿಮ್ಸ್ ಆಸ್ಪತ್ರೆಯ ಮಾನಸಿಕ ಆರೋಗ್ಯ ತಜ್ಞರಾದ ಡಾ.ರಮೇಶ ಬಾಬು ಅವರು ಮಾತನಾಡಿ, ಸೇಂದಿಯ ಬಗ್ಗೆ ಇರುವ ಮೌಢ್ಯತೆಯಿಂದ ನಾವು ಹೊರ ಬರಬೇಕು ಎಂದರು.

ಈ ವೇಳೆ ಗ್ರಾಮೀಣ ಠಾಣೆಯ ಆರಕ್ಷಕರಾದ ಸಾಬಯ್ಯ ಅವರು ಮಾತನಾಡಿ, ಸೇಂದಿ ಸೇವನೆಯಿಂದ ಸಮಾಜದಲ್ಲಿ ಅಶಾಂತಿ ಮೂಡುತ್ತಿದೆ. ದೈಹಿಕ ಮತ್ತು ಮಾನಸಿಕ ಸ್ವಾಸ್ತ್ಯ್ಯ ಹಾಳು ಮಾಡುತ್ತಿರುವ ಸೇಂದಿ ಮತ್ತು ಮುಂತಾದ ಮಾದಕ ವಸ್ತುಗಳ ಉತ್ಪಾದನೆ, ತಯಾರಿಸುವಿಕೆ, ಕಳ್ಳಸಾಗಾಣೆ ಮತ್ತು ಮಾರಾಟ ಮುಂತಾದ ಕಾನೂನು ಬಾಹಿರ ಚಟುವಟಿಕೆಗಳನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಪೋಲಿಸ್ ಇಲಾಖೆ, ಅಬಕಾರಿ ಇಲಾಖೆ, ಎನ್.ಸಿ.ಬಿ ಹಾಗೂ ರಾಜ್ಯ ಮತ್ತು ಕೇಂದ್ರ ಸರಕಾರಗಳು ನೇಮಿಸಿರುವಂತಹ ಏಜೆನ್ಸಿಗಳು ಕಾರ್ಯ ಪ್ರವೃತ್ತವಾಗಿವೆ. ಇತ್ತಿಚಿನ ದಿನಗಳಲ್ಲಿ ರಾಯಚೂರು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸೇಂದಿ ಮಾರಾಟಕ್ಕೆ ಸಂಬಂಧಪಟ್ಟಂತ ಪ್ರಕರಣಗಳನ್ನು ಪತ್ತೆ ಹಚ್ಚಿ ಆರೋಪಿತರನ್ನು ಬಂಧಿಸಿ ಕ್ರಮ ಜರುಗಿಸಲಾಗಿದೆ. ಅಕ್ರಮ ಚಟುವಟಿಕೆಯಲ್ಲಿ ತೊಡಗಿದ್ದಲ್ಲಿ ಏನೆಲ್ಲಾ ಶಿಕ್ಷೆ, ದಂಢನೆಗಳಿವೆ ಎಂದು ಸಹವಿವರವಾಗಿ ಕಾನೂನಿನ ಅರಿವು ಮೂಡಿಸಿದರು. ಅಲ್ಲದೆ ಸೇಂದಿ ಹಾಗೂ ಮಾದಕ ವಸ್ತು ಸಂಬಂಧಿ ಅಪರಾಧಗಳು ಕಂಡು ಬಂದ ಪಕ್ಷದಲ್ಲಿ ಪೋಲಿಸ್ ಮತ್ತು ಅಬಕಾರಿ ಇಲಾಖೆಗೆ ಮಾಹಿತಿಯನ್ನು ನೀಡಿ ಅಪರಾಧಗಳನ್ನು ತಡೆಯುವಲ್ಲಿ ಸಹಕರಿಸುವಂತೆ ಕೋರಿದರು.

**(2ನೇ ಪುಟಕ್ಕೆ>>>)**

## ಪಟ್ಟಣದ ಬಂಗಾರ ಅಭರಣ ಮಾರಾಟಗಾರರಿಗೆ ಜಾಗೃತಿ ಮೂಡಿಸಿದ ಪೊಲೀಸ್ ಅಧಿಕಾರಿಗಳು

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.30–** ಪಟ್ಟಣದಲ್ಲಿನ ವಿವಿಧ ಬಂಗಾರ ಹಾಗೂ ಬೆಳ್ಳಿಯ ಅಭರಣಗಳನ್ನು ತಯಾರಿಸುವವರ ಹಾಗೂ ಮಾರಾಟ ಮಳಿಗೆಗಳು,ಜ್ಯೂವೇಲ್ಲರಿ ಅಂಗಡಿಗಳಿಗೆ ಮಾನ್ವಿ ಪೊಲೀಸ್ ಠಾಣೆಯ ಎ.ಎಸ್.ಐ. ಶಿವಲಿಂಗಪ್ಪ ಭೇಟಿ ನೀಡಿ ಅಂಗಡಿ ಮಾಲಿಕರಿಗೆ ಸಾರ್ವಜನಿಕ ಸುರಕ್ಷತೆ ಅಧಿನಿಯಮ 2017 ಕಲಂ 6 (1) ಅಡಿಯಲ್ಲಿ ನೋಟಿಸ್ ನೀಡಿ ಮಾತನಾಡಿ ರಾಯಚೂರು ಜಿಲ್ಲಾ ಪೋಲಿಸ್ ಅಧೀಕ್ಷಕರು ಇತ್ತಿಚಿನ ದಿನಗಳಲ್ಲಿ ಜಿಲ್ಲೇಯಲ್ಲಿ ಅಭರಣ ಅಂಗಡಿಗಳಲ್ಲಿ ರಾಜಸ್ಥಾನ ಮತ್ತು ಉತ್ತರಪ್ರದೇಶದಿಂದ ಎರಡು ವಿಭಿನ್ನವಾದ ಕಳ್ಳರ ತಂಡಗಳು ಕಾರ್ಯಚಾರಿಸಿ ಅಭರಣ ಅಂಗಡಿಗಳಲ್ಲಿ ಕಳ್ಳತನ ಮಾಡುತ್ತಿರುವ ಪ್ರಕರಣಗಳು ವರದಿಯಾಗುತ್ತಿರುವ ಕುರಿತು ನೀಡಿದ ಸೂಚನೆ ನೀಡಿದ್ದು ಅದರಂತೆ ಮಾನ್ವಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಂಗಾರದ ಅಭರಣಗಳ ಮಾರಾಟಗಾರರು ತಮ್ಮಲಿರುವ ಕೋಟ್ಯಾಂತರ ಬೆಲೆ ಬಾಳುವ ಬಂಗಾರ,ಬೆಳ್ಳಿ ಸೇರಿದಂತೆ ಅಮೂಲ್ಯವಾದ **(2ನೇ ಪುಟಕ್ಕೆ>>>)**

# ಮೊದಲನೇಯ ಪುಟದಿಂದ

## ಶಿಕ್ಷಕರ ಕ್ಷೇತ್ರದ ಮತದಾರರು ಹೆಸರನ್ನು ಪರಿಶೀಲಿಸಿಕೊಳ್ಳಿ: ಎಡಿಸಿ ಶಿವಾನಂದ

ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಹಾಗೂ ಇತರೆ ತತ್ಸಮಾನ ಅಧಿಕಾರಿಯವರನ್ನು ಸಹಾಯಕ ಮತದಾರರ ನೊಂದಣಾಧಿಕಾರಿಯನ್ನಾಗಿ ನೇಮಿಸಲಾಗಿದೆ ಎಂದರು.ಅರ್ಹತಾ ದಿನಾಂಕ: 01.11.2025ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30ರಂದು ಸಂಪೂರ್ಣ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಚೂರಪಡಿಸಲಾಗಿದ್ದು, ಮತದಾರರು ತಮ್ಮ ಹೆಸರನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲೆಯ ಆಯಾ ಸಂಬಂಧಪಟ್ಟ ತಾಲ್ಲೂಕಿನ ತಹಸೀಲ್ದಾರ, ಮಹಾನಗರ ಪಾಲಿಕೆ ಕಾರ್ಯಾಲಯದಲ್ಲಿ ಪರಿಶೀಲಿಸಿಕೊಳ್ಳಬಹುದಾಗಿದೆ ಎಂದರು.ಮತದಾನ ಕೇಂದ್ರಗಳ ವಿವರವನ್ನು ಆಯೋಗದ ಮಾರ್ಗಸೂಚಿಗಳನ್ವಯ 16ಕೀ.ಮೀ ವ್ಯಾಪ್ತಿಗೊಳಪಡುವ ಕನಿಷ್ಠ 30 ಮತದಾರರು ಒಳಪಡುವ ಮತದಾರರಿಗೆ ಮತಗಟ್ಟೆ ಸ್ಥಾಪಿಸಲು ಅವಕಾಶ ಕಲ್ಪಿಸಿದ್ದು, ಅದರಂತೆ ಪ್ರಸ್ತುತವಾಗಿ 145 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ನಿರಂತರ ನೋಂದಣಿ ಪ್ರಕ್ರಿಯೆಯಲ್ಲಿ ನೋಂದಾಯಿಸಲ್ಪಡುವ ಮತದಾರರಿಗನುಗುಣವಾಗಿ ಆಯೋಗದ ಮಾರ್ಗಸೂಚಿಗಳನ್ವಯ ಮತದಾನ ಕೇಂದ್ರಗಳನ್ನು ಮುಂದಿನ ದಿನಗಳಲ್ಲಿ ಚುನಾವಣಾ ಸಮಯದಲ್ಲಿ ಅಂತಿಮ ಗೊಳಿಸಲಾಗುವುದು ಎಂದರು.ಮತದಾರರಲ್ಲಿ ಮನವಿ: ಇದೊಂದು ನಿರಂತರ ನೋಂದಣಿ ಪ್ರಕ್ರಿಯೆಯಾಗಿರುವ ಹಿನ್ನೆಲೆಯಲ್ಲಿ ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಅರ್ಹ ಮತದಾರರು ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಅವಕಾಶವಿರುತ್ತದೆ. ಕಾರಣ ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದರು.ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ, ಲಿಂಗಸುಗೂರು ವಿಭಾಗದ ಸಹಾಯಕ ಆಯುಕ್ತರಾದ ಬಸವಣೆಪ್ಪ ಕುಲಶೆಟ್ಟಿ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ಸಿಂಧನೂರು ನಗರಸಭೆಯ ಪೌರಾಯುಕ್ತರಾದ ಶೃತಿ ಕೆ. ಸೇರಿದಂತೆ ಇತರರು ಇದ್ದರು.

## ಅಕ್ರಮ ವಾಸಿಗಳಿಗೆ ಮನೆ ಭಾಗ್ಯ ಸರ್ಕಾರದ ವಿರುದ್ಧ ಸಾರ್ವಜನಿಕರ ಆಕ್ರೋಶ

ಮನೆಗಳನ್ನು ನಿರ್ಮಿಸಿಕೊಂಡಿದ್ದರೆ ಅಧಿಕಾರಿಗಳಿಗೆ ಇದರ ಬಗ್ಗೆ ಮಾಹಿತಿ ಇರಲಿಲ್ಲವೇ? ಕಾನೂನು ಬದ್ಧವಾಗಿ ಇರುವಾಗ ಮನೆಗಳನ್ನು ಹೇಗೆ ತೆರವುಗೊಳಿಸಿದರು? ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ನೀಡಬೇಕಿತ್ತು. ಅಲ್ಲದೆ ಈಗ ಸರ್ಕಾರವೇ ಹಣ ಹಾಕಿ ಸಂತ್ರಸ್ತರಿಗೆ ಮನೆ ನಿರ್ಮಿಸಿ ಕೊಡುತ್ತೇನೆ ಎಂದು ಹೇಳುತ್ತಿರುವುದು ಒಂದು ಕಣ್ಣಿಗೆ ಸುಣ್ಣ, ಮತ್ತೊಂದು ಕಣ್ಣಿಗೆ ಬೆಣ್ಣೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ.ಒಂದು ನಿರ್ದಿಷ್ಟ ಸಮುದಾಯವನ್ನು ಓಲೈಸಿಕೊಳ್ಳುವ ಕಾರಣಕ್ಕಾಗಿ ಸರ್ಕಾರ ಮನೆ ನಿರ್ಮಿಸಿಕೊಡಲು ಮುಂದಾಗಿದೆ. ಈ ಹಿಂದೆ ಅನೇಕ ಮನೆಗಳನ್ನು ತೆರವು ಮಾಡಲಾಗಿತ್ತು. ಅದರಲ್ಲಿ ಬಹುತೇಕರು ದಲಿತರು, ಪರಿಶಿಷ್ಟ ಪಂಗಡ, ಹಿಂದುಳಿದವರು, ಆರ್ಥಿಕವಾಗಿ ಹಿಂದುಳಿದವರೇ ಹೆಚ್ಚಾಗಿದ್ದರು. ಆದರೆ. ಅಂದು ಮನೆಗಳನ್ನು ತೆರವುಗೊಳಿಸಿದಾಗ ಇಲ್ಲದ ಮಾನವೀಯತೆ ಈಗ ರಾತೋರಾತ್ರಿ ಹೇಗೆ ಬಂತು ಎಂದು ಮನೆ ಕಳೆದುಕೊಂಡವರೇ ಪ್ರಶ್ನೆ ಮಾಡುತ್ತಿದ್ದಾರೆ.ಸಾಮಾನ್ಯವಾಗಿ ಬಿಡಿಎ, ಬಿಬಿಎಂಪಿ, ಅರಣ್ಯ, ಕಂದಾಯ ಸೇರಿದಂತೆ ಇತರೆ ಇಲಾಖೆಗಳಿಗೆ ಸೇರಿದ ಜಮೀನಿನಲ್ಲಿ ನಿವೇಶನಗಳನ್ನು ನಿರ್ಮಿಸಿಕೊಂಡರೆ ಅಂತವರಿಗೆ ಇಂತಹ ಸಮಯದಲ್ಲಿ ಮನೆಗಳನ್ನು ತೆರವು ಮಾಡುತ್ತೇವೆ. ನೀವು ಮನೆ ಖಾಲಿ ಮಾಡಿ ಎಂದು ನೋಟಿಸ್ ನೀಡಲಾಗುತ್ತದೆ. ಇವರಿಗೆ ಮೊದಲೇ ಇದರ ಸೂಚನೆಯನ್ನು ನೀಡಲಾಗಿತ್ತು. ಈ ಹಿಂದೆ ಸಾವಿರಾರು ಮನೆಗಳನ್ನು ತೆರವುಗೊಳಿಸಿದಾಗ ಯಾವುದೇ ನೋಟಿಸ್ ಕೂಡ ಕೊಡದೆ ತೆರವು ಮಾಡಿರುವ ನಿದರ್ಶನಗಳು ಸಾಕಷ್ಟಿವೆ. ಈಗ ಒಂದು ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕಾಗಿ ಸರ್ಕಾರದ ಈ ಕ್ರಮ ಸರಿಯೇ ಎಂಬ ಪ್ರಶ್ನೆ ಸಾರ್ವಜನಿಕದಲ್ಲಿ ಕೇಳಿ ಬರುತ್ತದೆ.

ಕರ್ನಾಟಕದಲ್ಲಿ ಜನರಿಂದ ಆಯ್ಕೆಯಾದ ಸರ್ಕಾರ ಇರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಇಲ್ಲವೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮೇಲೆ ಹೈಕಮಾಂಡ್ ನಾಯಕರು ಒತ್ತಡ ಹಾಕಿ ಮನೆ ನಿರ್ಮಿಸಿ ಕೊಡುವಂತೆ ಸೂಚಿಸಿದ್ದು ಸರಿಯೇ ಎಂಬ ಪ್ರಶ್ನೆಯನ್ನು ಮಾಡುತ್ತಿದ್ದಾರೆ. ಅದರಲ್ಲೂ ಕೇರಳದ ಸಂಸದ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರ ಒಂದೇ ಒಂದು ಟ್ವಿಟ್ ಮಾಡಿದರು ಎಂಬ ಕಾರಣಕ್ಕಾಗಿ ಸರ್ಕಾರ ಹೊಸದಾಗಿ ಮನೆ ನಿರ್ಮಾಣ ಮಾಡಲು ಮುಂದಾಗಿರುವುದು ಹಲವರ ಕಣ್ಣು ಕೆಂಪಾಗುವಂತೆ ಮಾಡಿದೆ.ಸಿಎಂ ಕುರ್ಚಿ ಮೇಲೆ ಕಣ್ಣು :ಅಂದಹಾಗೆ ಕರ್ನಾಟಕದ ಕೋಗಿಲು ಲೇಔಟ್‌ನಲ್ಲಿ ಮನೆಗಳನ್ನು ತೆರವುಗೊಳಿಸಿರುವುದಕ್ಕೂ, ಮುಂದಿನ ವರ್ಷ ನಡೆಯಲಿರುವ ಕೇರಳ ವಿಧಾನಸಭಾ ಚುನಾವಣೆಗೂ ಒಂದಕ್ಕೊಂದು ಸಂಬಂಧವಿದೆ ಎನ್ನಲಾಗುತ್ತಿದೆ.

ಇತ್ತೀಚೆಗೆ ಕೇರಳದಲ್ಲಿ ನಡೆದ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಆಡಳಿತರೂಢ ಎಲ್‌ಡಿಎಫ್ ಹಿಂದಿಕ್ಕಿ ಪ್ರತಿಪಕ್ಷ ಸ್ಥಾನದಲ್ಲಿದ್ದ ಯುಡಿಎಫ್ ಹೆಚ್ಚಿನ ಸ್ಥಾನ ಗಳಿಸಿತ್ತು. ಅದರಲ್ಲೂ ಎಡಪಂಥೀಯರ ಭದ್ರಕೋಟೆ ಎನಿಸಿದ ಕೇರಳದ ರಾಜಧಾನಿ ತಿರುವಂತನಪುರಂನಲ್ಲಿ ಕಾಂಗ್ರೆಸ್ ಮತ್ತು ಎಡಪಕ್ಷಗಳನ್ನು ಹಿಂದಿಕ್ಕಿ ಬಿಜೆಪಿ ಮೊದಲ ಬಾರಿಗೆ ಅಧಿಕಾರ ಗದ್ದುಗೆ ಹಿಡಿದಿದ್ದು ಎರಡು ಪಕ್ಷಗಳಿಗೆ ನುಂಗಲಾದ ಬಿಸಿ ತುಪ್ಪವಾಗಿ ಪರಿಣಮಿಸಿತ್ತು. ನಾರಾಯಣ ಗುರುಗಳ ತವರೂರಾದ ಕೇರಳದಲ್ಲಿ ಇತ್ತೀಚೆಗೆ ರಾಜಕೀಯ ಧೃವೀಕರಣ ನಡೆಯುತ್ತಿರುವುದು ಸುಳ್ಳಲ್ಲ.ಹಿಂದೂ ಸಮುದಾಯದವರು ನಿಧಾನವಾಗಿ ಬಿಜೆಪಿ ಕಡೆ ವಾಲುತ್ತಿದ್ದರೆ, ಎಂದಿನಂತೆ ಅಲ್ಪಸಂಖ್ಯಾತರು ಮತ್ತಿತರರು ಎಲ್‌ಡಿಎಫ್ ಮತ್ತು ಯುಡಿಎಫ್ ನಡುವೆ ಹಂಚಿ ಹೋಗಿದ್ದಾರೆ. ಮುಂದಿನ ವರ್ಷ ಕೇರಳದಲ್ಲಿ ವಿಧಾನಸಭೆ ಚುನಾವಣೆ ಜರುಗಲಿದ್ದು ಸತತ ಎರಡು ಬಾರಿ ಅಧಿಕಾರ ನಡೆಸಿರುವ ಮುಖ್ಯಮಂತ್ರಿ ಪಿಣರಾಯಿ ನೇತೃತ್ವದ ಎಲ್‌ಡಿಎಫ್ ಆಡಳಿತ ವಿರೋಧಿ ಅಲೆಗೆ ಸಿಲುಕಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಗೆದ್ದಿರುವ ಯುಡಿಎಫ್ ಈ ಬಾರಿ ಕೇರಳದಲ್ಲಿ ಅಧಿಕಾರದ ಗದ್ದಿಗೆ ಹಿಡಿಯಲೇ ಬೇಕೆಂಬ ಹಠಕ್ಕೆ ಬಿದ್ದಿದೆ.

ದೇಶದಲ್ಲಿ ಕಾಂಗ್ರೆಸ್ ಅನೇಕ ರಾಜ್ಯಗಳಲ್ಲಿ ಸೋತು ಸುಣ್ಣವಾಗಿರುವಾಗ ಅದಕ್ಕೆ ಆಸರೆಯಾಗಿರುವುದು ಕೇರಳ. ಒಂದು ವೇಳೆ ಕೇರಳದಲ್ಲಿ ಯುಡಿಎಫ್ ಅಧಿಕಾರಕ್ಕೆ ಬಂದರೆ ಸಹಜವಾಗಿ ಮುಖ್ಯಮಂತ್ರಿ ಸ್ಥಾನದ ಮೇಲೆ ಕೆ.ಸಿ.ವೇಣುಗೋಪಾಲ ಕಣ್ಣಿಟ್ಟಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಎ.ಕೆ.ಂಟನಿ ಸದ್ಯಕ್ಕೆ ಸಕ್ರಿಯ ರಾಜಕಾರಣದಲ್ಲಿ ಇಲ್ಲ. ಗಾಂಧಿ ಕುಟುಂಬಕ್ಕೆ ಅತ್ಯಂತ ಆತಿಯರಾಗಿರುವ ವೇಣುಗೋಪಾಲ್ ಕೇರಳದಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ಸಿಎಂ ಸ್ಥಾನದ ಪ್ರಬಲ ಆಕಾಂಕ್ಷಿಯೂ ಹೌದು.

ಕಾಂಗ್ರೆಸ್‌ಗೆ ಭದ್ರಕೋಟೆಯಾಗಿರುವ ಅಲ್ಪಸಂಖ್ಯಾತರು ಮುನಿಸಿಕೊಂಡರೆ ಪಕ್ಷಕ್ಕೆ ಹಿನ್ನಡೆಯಾಗಬಹುದು ಎಂಬ ಭೀತಿಯಿಂದಾಗಿ ಬೆಂಗಳೂರಿನ ಕೋಗಿಲು ಪ್ರದೇಶದಲ್ಲಿ ವಿಶೇಷ ಮುತುವರ್ಜಿ ವಹಿಸಿ ಸಂತ್ರಸ್ತರಿಗೆ ಮನೆಗಳನ್ನು ನಿರ್ಮಿಸಿಕೊಡಲು ಸರ್ಕಾರಕ್ಕೆ ಸೂಚನೆ ಕೊಟ್ಟಿರಬಹುದು ಎಂಬ ಆರೋಪ ಕೇಳಿ ಬರುತ್ತಿದೆ.ಅಲ್ಪಸಂಖ್ಯಾತರನ್ನು ಓಲೈಸಿಕೊಂಡರೆ ಕೇರಳದಲ್ಲಿ ಹೆಚ್ಚಾಗಿರುವ ಈ ಸಮುದಾಯದವರು ಕಾಂಗ್ರೆಸ್ಸಿಗೆ ಬೆನ್ನೆಲುಬಾಗಿ ನಿಲ್ಲಬಹುದೆಂಬ ದೂರದೃಷ್ಟಿಯೂ ಇದೆ. ಆದರೆ ಸರ್ಕಾರದ ನಡೆಗೆ ಸಾರ್ವಜನಿಕ ವಲಯದಲ್ಲಿ ಬೇರೆಯದೇ ಆದ ಅಭಿಪ್ರಾಯ ವ್ಯಕ್ತವಾಗುತ್ತಿದೆ.ಅಲ್ಪಸಂಖ್ಯಾತರಿಗೆ ಮನೆಗಳನ್ನು ನಿರ್ಮಿಸಿಕೊಡಲು ನಮದೇನೂ ಅಭ್ಯಂತರವಿಲ್ಲ ಆದರೆ ಕೇವಲ ಮತಕ್ಕೊಸ್ಕರ ಅವರಿಗೆ ಮನೆ ಕಟ್ಟಿಕೊಟ್ಟು ನಮನ್ನು ಬೀದಿಗೆ ಬೀಳಿಸಿದ್ದು ಎಷ್ಟರ ಮಟ್ಟಿಗೆ ಸರಿ ಎಂಬುದು ಸಂತ್ರಸ್ತರ ಅಳಲು. ಉತ್ತರಿಸಬೇಕಾದ ಸರ್ಕಾರ ಇಕ್ಕಟ್ಟಿನಲ್ಲಿದೆ.

## ಐತಿಹಾಸಿಕ ಅಂಬಾ ಮಹೋತ್ಸವ-2026ರಲ್ಲಿ ರಾಜ್ಯದ ಸಿಎಂ, ಡಿಸಿಎಂ, ಸಚಿವರು, ಗಣ್ಯರು ಭಾಗಿ: ಶಾಸಕ ಹಂಪನಗೌಡ ಬಾದರ್ಲಿ

ಲಕ್ಷಾಂತರ ಭಕ್ತರಿಗೆ ಅನುಕೂಲವಾಗಲು ಈ ಬಾರಿ ಮಠದ ಆವರಣವನ್ನು ಅಚ್ಚುಕಟ್ಟಾಗಿ ಸಿದ್ಧಪಡಿಸಲಾಗಿದೆ. ರಸ್ತೆ, ಕುಡಿಯುವ ನೀರು, ಶುಚಿತ್ವ ಸೇರಿದಂತೆ ಭಕ್ತರಿಗೆ ಅಗತ್ಯ ಮೂಲಭೂತ ಸೌಕರ್ಯಕ್ಕೆ ವ್ಯವಸ್ಥೆ ಮಾಡಲಾಗಿದೆ. ಈ ಬಾರಿ ಮಠದ ಆವರಣದಲ್ಲಿ 132 ಅಡಿ ಅಗಲದ ರಥಬೀದಿಯನ್ನು ಸುಸಜ್ಜಿತವಾಗಿ ಸಿದ್ಧಪಡಿಸಲಾಗಿದೆ. ಜೊತೆಗೆ ಈ ಬಾರಿ ಮಠದ ಹತ್ತಿರದ 9 ಎಕರೆ ಜಾಗದಲ್ಲಿ ಮಿಟಾಯಿ, ಬಳೆ, ಆಟಿಕೆ ಸಾಮಾನು, ಆಟದ ಯಂತ್ರಗಳ ಹಾಗೂ ಇನ್ನೀತರ ಜಾತ್ರಾ ಅಂಗಡಿಗಳಿಗೆ ಒಂದೆಡೆ ಸಾಲಾಗಿ ಶಿಸ್ತುಬದ್ಧವಾಗಿ ವ್ಯವಸ್ಥೆ ಮಾಡಲಾಗಿದೆ. ಜಾತ್ರಾ ಹಿನ್ನೆಲೆಯಲ್ಲಿ ತಲಾ 6 ಹೆಲ್ಪ್ ಡೆಸ್ಕ್ ಹಾಗೂ ಹೆಲ್ತ್ ಡೆಸ್ಕ್ ಸ್ಥಾಪಿಸಲಾಗಿದೆ. ಸ್ಥಳೀಯ ವಿವಿಧ ಕಾಲೇಜುಗಳ ಎನ್‌ಎಸ್‌ಎಸ್ ಹಾಗೂ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಹಾಗೂ ತಾಲೂಕಿನ ಗ್ರಾಮ ಲೆಕ್ಕಾಧಿಕಾರಿಗಳು, ಕಂದಾಯ ನಿರೀಕ್ಷಕರು ಮತ್ತು ತಾಲೂಕು ಮಟ್ಟದ ಅಧಿಕಾರಿಗಳನ್ನು ಒಳಗೊಂಡು ತಂಡ ರಚಿಸಿ ಜಾತ್ರೋತ್ಸವದ ನಾನಾ ಸೇವೆಗೆ ನಿಯೋಜನೆ ಮಾಡಿದ್ದೇವೆ ಎಂದು ಶಾಸಕರು ಮಾಹಿತಿ ನೀಡಿದರು. ರಾಯಚೂರು ಜಿಲ್ಲೆಯ ಇತಿಹಾಸದಲ್ಲಿಯೇ ಸಿಂಧನೂರು ತಾಲೂಕು ವ್ಯಾಪ್ತಿಯಲ್ಲಿ ಏಕಕಾಲಕ್ಕೆ 24 ಕಂದಾಯ ಗ್ರಾಮಗಳಿಗೆ ಅಧಿಸೂಚನೆ ಹೊರಡಿಸಿ ಘೋಷಿಸಿ ಆಯಾ ಕಂದಾಯ ಗ್ರಾಮದಲ್ಲಿನ ಫಲಾನುಭವಿಗಳಿಗೆ ಕಂದಾಯ ಸಚಿವರು ಸಾಂಕೇತಿಕವಾಗಿ ಹಕ್ಕುಪತ್ರ ವಿತರಣೆ ಮಾಡಲಿದ್ದಾರೆ ಎಂದು ಶಾಸಕರು ತಿಳಿಸಿದರು.174 ಕೋಟಿ ರು ವೆಚ್ಚದಲ್ಲಿ ಅಂದಾಜು 20,000 ಎಕರೆ ಜಮೀನಿಗೆ ನೀರು ಪೂರೈಸುವ ಏತ ನೀರಾವರಿ ಯೋಜನೆಗೆ, 69 ಕೋಟಿ ರೂ ವೆಚ್ಚದಲ್ಲಿ ಬ್ರಿಜ್ ಮತ್ತು ಬ್ಯಾರೇಜ್ ನಿರ್ಮಾಣ, 39 ಕೋಟಿ ರು ವೆಚ್ಚದಲ್ಲಿ ಸಿಂಧನೂರಿನ ಹಳ್ಳಕ್ಕೆ ಬ್ರಿಜ್ ಕಮ್ ಬ್ಯಾರೇಜ್ ನಿರ್ಮಾಣ, ಗಾಂಧಿನಗರದಿಂದ ಗೊರೆಬಾಳ ಗ್ರಾಮದವರೆಗೆ ರಸ್ತೆ ಕಾಮಗಾರಿ ಸೇರಿದಂತೆ ನಾನಾ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತದೆ.ಸಿಂಧನೂರು ತಾಲೂಕಿನಲ್ಲಿ ಅಂದಾಜು 18 ಪದವಿ ಕಾಲೇಜುಗಳು, 32 ಪಿಯುಸಿ ಕಾಲೇಜ್ ಗಳಿದ್ದು ಅಂದಾಜು 25,000 ಕಾಲೇಜು ವಿದ್ಯಾರ್ಥಿಗಳಿಗೆ ಆಯಾ ಗ್ರಾಮಗಳಿಂದ ಸಿಂಧನೂರು ನಗರಕ್ಕೆ ಬಂದು ಹೋಗಲು ಅನುಕೂಲವಾಗುವಂತೆ ವಿದ್ಯಾರ್ಥಿಗಳಿಗೆಂದೇ 5 ಕೋಟಿ ರೂ ವೆಚ್ಚದಲ್ಲಿ 15 ಬಸ್ಸುಗಳಿಗೆ ಚಾಲನೆ ನೀಡುವ ಕಾರ್ಯಕ್ರಮವು ಸಹ ಇದೇ ವೇಳೆ ನಡೆಯಲಿದೆ ಎಂದು ಶಾಸಕರು ವಿವರಿಸಿದರು.ಈ ಕಾರ್ಯಕ್ರಮದಲ್ಲಿ ಸಚಿವರಾದ ಶರಣಪ್ರಕಾಶ ಪಾಟೀಲ್, ರಾಮಲಿಂಗಾರೆಡ್ಡಿ ಸತೀಶ್ ಜಾರಕಿಹೊಳಿ, ಪ್ರಿಯಾಂಕ ಖರ್ಗೆ, ಶಿವರಾಜ ತಂಗಡಗಿ, ಎನ್.ಎಸ್.ಬೋಸರಾಜು ಸೇರಿದಂತೆ ಇನ್ನಿತರ ಸಚಿವರು ಭಾಗಿಯಾಗಲಿದ್ದಾರೆ ಎಂದು ಶಾಸಕರು ತಿಳಿಸಿದರು.ಸಿಂಧನೂರು ತಾಲೂಕಾಡಳಿತ, ತಾಲೂಕ್ ಪಂಚಾಯತ್ ಹಾಗೂ ಧಾರ್ಮಿಕ ದತ್ತಿ ಇಲಾಖೆ ಇವರ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ತಹಸೀಲ್ದಾರರಾದ ಅರುಣ ದೇಸಾಯಿ, ತಾಪಂ ಇಓ ಚಂದ್ರಶೇಖರ, ಮುಖಂಡರಾದ ಆರ್ ಸಿ ಪಾಟೀಲ, ಖಾಜಿ ಮಲಿಕ್ ಹಾಗೂ ಇತರರು ಇದ್ದರು.

## ಕಾಂಗ್ರೆಸ್ ಮುಕ್ತ ದೇಶ ಮಾಡೋದು ಬಿಜೆಪಿ ಭ್ರಮೆ: ಚಂದ್ರಶೇಖರಗೌಡ



**ತುಮಕೂರು, ಡಿ. 30–** ದೇಶದ ಸ್ವಾತಂತ್ರ್ಯಕ್ಕಾಗಿ ದುಡಿದ 140 ವರ್ಷಗಳ ಇತಿಹಾಸವಿರುವ ಕಾಂಗ್ರೆಸ್ ಪಕ್ಷವನ್ನು ದೇಶದಿಂದ ಮುಕ್ತ ಮಾಡುತ್ತೇವೆ ಎಂಬುದು ಬಿಜೆಪಿ ಭ್ರಮೆ. ಆರಂಭದಿಂದ ಇಲ್ಲಿಯವರೆಗೂ ದೇಶದ ಎಲ್ಲ ಧರ್ಮ, ಜಾತಿಯ ಜನರನ್ನು ಸಮಾನವಾಗಿ ಕಾಣುವ ಪಕ್ಷ ಎಂದರೆ ಅದು ಕಾಂಗ್ರೆಸ್ ಮಾತ್ರ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ. ಚಂದ್ರಶೇಖರಗೌಡ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಏರ್ಪಡಿಸಿದ್ದ ಕಾಂಗ್ರೆಸ್ ಪಕ್ಷದ 140 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂವಿಧಾನದ ಆಶಯದಂತೆ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ನೀತಿಯನ್ನು ಕಾಂಗ್ರೆಸ್ ಅನುಸರಿಸಿಕೊಂಡು ಬಂದಿದೆ. ಸಾರಿಗೆ, ಬ್ಯಾಂಕುಗಳ ರಾಷ್ಟ್ರೀಕರಣ, ಉಳುವವನೇ ಭೂಮಿಯ ಒಡೆಯ ಇನ್ನಿತರ ಕಾಯ್ದೆಗಳು ಬಡವರು, ಶ್ರೀಮಂತರ ನಡುವಿನ ತಾರತಮ್ಯವನ್ನು ಕಡಿಮೆ ಮಾಡುವಲ್ಲಿ ಸಹಕಾರಿಯಾಗಿದ್ದವು. ಆದರೆ ಇಂದಿನ ಪ್ರಧಾನಿಯ ಯೋಜನೆಗಳು ಬಡವರು ಮತ್ತು ಶ್ರೀಮಂತರ ನಡುವಿನ ಅಂತರವನ್ನು ಮತ್ತಷ್ಟು ಹೆಚ್ಚಿಸಿದೆ. ಕಾರ್ಪೋರೇಟ್ ಪರ ಕಾಯ್ದೆಗಳಿಂದ ಜನರ ತಲಾದಾಯದಲ್ಲಿ ಅಜ ಗಜಾಂತರ ವ್ಯತ್ಯಾಸವಿದ್ದು, ಅಲ್ಲದೆ ಒಂದೊಂದೆ ಕಾಯ್ದೆಗಳ ಮೂಲಕ ಸಂವಿಧಾನದ ಅಸ್ಥಿತ್ವವನ್ನು ಇಲ್ಲವಾಗಿಸುವ ಪ್ರಯತ್ನ ನಡೆದಿದೆ. ಇದನ್ನು ಎಲ್ಲ ಕಾಂಗ್ರೆಸ್ ಕಾರ್ಯಕರ್ತರು ವಿರೋಧಿಸಬೇಕು ಎಂದರು.

2026ರ ಜನವರಿ 5 ರಂದು ನಡೆಯುವ ಎಂ.ಎನ್.ಆರ್.ಜಿ.ಎ ಪರ ಹೋರಾಟದಲ್ಲಿ ನಾವೆಲ್ಲರೂ ಪಾಲ್ಗೊಳ್ಳೋಣ ಎಂದರು.ಮಾಜಿ ಶಾಸಕ ಡಾ.ಎಸ್.ಷಫ ಅಹಮದ್ ಮಾತನಾಡಿ, ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಹುಟ್ಟಿನ ಹಿಂದಿರುವ ಮಹತ್ವವನ್ನು ಅರ್ಥ ಮಾಡಿಕೊಳ್ಳಬೇಕು. ಪಕ್ಷ ನಿಷ್ಠರಾಗಿದ್ದರೆ ಒಂದಿಲೊಂದು ದಿನ ಅಧಿಕಾರ ನಿಮ್ಮನ್ನು ಹುಡುಕಿಕೊಂಡು ಬರಲಿದೆ. ಅಧಿಕಾರಕ್ಕೆ ಇದುವರೆಗೂ ಬದುಕು ನೀಡಿದ ಪಕ್ಷಕ್ಕೆ ದ್ರೋಹ ಬಗೆಯಬಾರದು. ಪಕ್ಷ ಕಟ್ಟುವತ್ತ ನಾವೆಲ್ಲರೂ ಗಮನಹರಿಸಬೇಕು ಎಂದರು.

ಜಿ.ಪಂ.ಮಾಜಿ ಅಧ್ಯಕ್ಷ ಹಾಗೂ ಡಿಸಿಸಿ ಮಾಜಿ ಅಧ್ಯಕ್ಷ ಕೆಂಚಮಾರಯ್ಯ ಮಾತನಾಡಿ, ಬ್ರಿಟಿಷರ ದಬ್ಬಾಳಿಕೆಯನ್ನು ಕೊನೆಗಾಣಿಸುವ ಉದ್ದೇಶದಿಂದ ಮೋತಿಲಾಲ್ ನೆಹರು, ಗೋಕಲೆ ಸೇರಿದಂತೆ ಹಲವು ನಾಯಕರು ಸೇರಿ ಎ.ಓ,ಹ್ಯೂಮ್ ಎನ್ನುವ ಬ್ರಿಟಿಷ್‌ಅಧಿಕಾರಿ ಮುಂದಾಳತ್ವದಲ್ಲಿ 1885ರಲ್ಲಿ ಕಾಂಗ್ರೆಸ್ ಕಟ್ಟಿದರು. ಗಾಂಧಿ ಆಗಮನವದವರೆಗೂ ತೀವ್ರಗಾಮಿ ಸ್ವರೂಪದಲ್ಲಿದ್ದ ಚಳವಳಿ, ಸತ್ಯ, ಅಹಿಂಸೆ,ಶಾಂತಿ ಎಂಬ ಮೂರು ಅಂಶಗಳ ಮೇಲೆ ರೂಪಗೊಂಡು, ಬ್ರಿಟಿಷರನ್ನು ಭಾರತದಿಂದ ತೊಲಗಿಸಲು ಸಹಾಯವಾಯಿತು. ಆದರೆ ಇಂದು ದೇಶದ ಜನರು ಗಾಂಧಿ ಹೆಸರು ಹೇಳಲು ಹಿಂಜರಿಯುವಂತಹ ವಾತಾವರಣ ಸೃಷ್ಟಿಯಾಗಿದೆ.

ದೇಶದ ಯುವ ಜನರಿಗೆ ಸ್ವಾತಂತ್ರ ಹೋರಾಟದ ಅನುಭವವೇ ಇಲ್ಲದಂತಾಗಿದೆ. ಯುವ ಜನರಿಗೆ ತಿಳಿ ಹೇಳುವ ಕೆಲಸ ಆಗಬೇಕು. ಹಾಗೆಯೇ ಕಾಂಗ್ರೆಸ್ ಪಕ್ಷದಲ್ಲಿದ್ದು, ಎಲ್ಲವನ್ನು ಅನುಭವಿಸಿದ ನಂತರ ಬೇರೆ ಪಕ್ಷಕ್ಕೆ ಹೋಗುವವ ಅವಕಾಶವಾದಿಗಳನ್ನು ಪಕ್ಷದಿಂದ ಹೊರ ಹಾಕಬೇಕು ಎಂದರು.

ಮುಖಂಡ ಇಕ್ಬಾಲ್‌ಅಹಮದ್ ಮಾತನಾಡಿ, ಕಾಂಗ್ರೆಸ್ ಪಕ್ಷದ ಅನೇಕರ ತ್ಯಾಗ ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದೆ. ಇಂತಹ ಪಕ್ಷದ ಬಗ್ಗೆ ಕೆಟ್ಟದಾಗಿ ಮಾತನಾಡುವವರಿಗೆ ಸರಿಯಾಗಿ ತಿರುಗೇಟು ಕೊಡುವ ನಿಟ್ಟಿನಲ್ಲಿ ಕಾರ್ಯಕರ್ತರು ಪ್ರಜ್ಞಾವಂತಿಕೆ ಬೆಳೆಸಿಕೊಳ್ಳಬೇಕು.ಎಸ್.ಐ.ಆರ್.ಮೂಲಕ ಕಾಂಗ್ರೆಸ್ ಬೆಂಬಲಿಗರ ಮತ ಕಸಿಯುವ ಪ್ರಯತ್ನಕ್ಕೆ ಅವಕಾಶ ನೀಡದೆ ಮತದಾರರ ಪಟ್ಟಿ ಪರಿಷ್ಕರಣೆಯನ್ನುಎಚ್ಚರಿಕೆಯಿಂದ ಗಮನಿಸಿ, ಪ್ರತಿ ಮತದಾರರ ಹಕ್ಕನ್ನು ರಕ್ಷಿಸಬೇಕು ಎಂದರು.

ಮಹಿಳಾ ಮುಖಂಡರಾದ ಡಾ.ಅರುಂಧತಿ ಮಾತನಾಡಿ, ಸುಳ್ಳನ್ನು ವಿಜೃಂಭಿಸಿ ಬಿಜೆಪಿ ಅಧಿಕಾರ ಹಿಡಿಯುತ್ತಿದೆ. ಇಂತಹ ಸುಳ್ಳಿನ ಮುಖವಾಡ ಕಳಚಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಗೊಳಿಸಲು ನಾವೆಲ್ಲರೂ ಪ್ರಯತ್ನಿಸಬೇಕಾಗಿದೆ ಎಂದರು.ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಕಾಂಗ್ರೆಸ್ ಸಂಸ್ಥಾಪನಾ ದಿನದ ಅಂಗವಾಗಿ ಹಿರಿಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಆರ್.ರಾಮಕೃಷ್ಣ, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆಂಪಣ್ಣ, ಪಾಲಿಕೆ ಮಾಜಿ ಉಪಮೇಯರ್ ಅಸ್ಲಾಂಪಾಷ, ಮಾಜಿ ಶಾಸಕ ಗಂಗಹನುಮಯ್ಯ, ಯುವ ಕಾಂಗ್ರೆಸ್ ಮುಖಂಡ ಜೈನ್ ಷೇಕ್ ಫಯಾಜ್, ಜಿಲ್ಲಾ ಉಪಾಧ್ಯಕ್ಷರಾದ ರಂಗಸ್ವಾಮಯ್ಯ ಸಿದ್ದಾಪುರ, ನರಸೀಯಪ್ಪ, ಬಿ.ಜಿ.ಲಿಂಗರಾಜು, ಶಿವಾಜಿ, ಅತೀಕ್‌ಅಹಮದ್, ಸುಜಾತ, ವಿಜಯಲಕ್ಷ್ಮಿ, ಮುಬೀನ, ಭಾಗ್ಯ, ಜಯಮೂರ್ತಿ,ಸೇವಾದಳದ ಬೈಲಪ್ಪ ಸೇರಿದಂತೆ ಪದಾಧಿಕಾರಿಗಳು ಭಾಗವಹಿಸಿದ್ದರು.

## ಉಚಿತ ಮಹಿಳಾ ಕ್ಷೇಮಾ ತಪಾಸಣೆ ಶಿಬಿರಕ್ಕೆ ಗ್ರಾ.ಪಂ ಅಧ್ಯಕ್ಷ ನೀಲಕಂಠಪ್ಪ ಚಾಲನೆ

ಮಹಿಳೆಯರಿಗೆ ತಪಾಸಣೆಯನ್ನ ಉಚಿತವಾಗಿ ಮಾಡಿಸುತ್ತಿದ್ದಾರೆ ಎಂದರು.ನಂತರ ಉದ್ಬಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್ ಇವರು ಮಾತನಾಡಿ ಪೀಪಲ್ ಟು ಪೀಪಲ್ ಸಂಸ್ಥೆಯವರು ಸಾರ್ವಜನಿಕರಿಗೆ ಉಚಿತವಾಗಿ ಆರೋಗ್ಯ ಸೇವೆ ನೀಡಲು ಬಂದಿದ್ದಾರೆ. ಗ್ರಾಮಸ್ಥರು ಈ ಕಾರ್ಯಕ್ರಮವನ್ನು ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ನಂತರ ದಂತವೈದ್ಯರು ಡಾ.ದೇವರಾಜ ಅವರು ಮಾತನಾಡಿ ಸ್ತ್ರೀರೋಗ ತಜ್ಞರನ್ನ ಮತ್ತು ಹಲ್ಲು ಕಣ್ಣು ತಜ್ಞರನ್ನ ಗ್ರಾಮಕ್ಕೆ ಕರೇದು ಮಹಿಳೆಯರಿಗೆ ಉಚಿತವಾಗಿ ತಪಾಸಣೆ ಮಾಡಿಸೋದು ಶ್ಲಾಘನೀಯವಾದದ್ದು ಎಂದರು.

ಈ ಕಾರ್ಯಕ್ರಮದಲ್ಲಿ ಪ್ರಸ್ತಾವಿಕ ಮಾತನಾಡಿದ ಪೀಪಲ್ ಟು ಪೀಪಲ್ ಸಂಸ್ಥೆಯ ಪ್ರೋಗ್ರಾಮ್ ಮ್ಯಾನೇಜರ್ ಮಲ್ಲೈಕಾ ಅಮೀನ ಇವರು ಕಳೇದ ಒಂದು ವರ್ಷದಿಂದ ನಮ್ಮ ಸಂಸ್ಥೆಯು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಹಕಾರದಿಂದ ವೈಧ್ಯರು ಮತ್ತು ಸಿಬ್ಬಂಧಿಗಳು ಆಶಾ ಕಾರ್ಯಕರ್ತರ ಗ್ರಾಮಸ್ಥರ ಬೆಂಬಲದೊಂದಿಗೆ ಮಹಿಳಾ ಕ್ಷೇಮಾ ತಪಾಸಣೆ ಶಿಬಿರ ಕೈಗೊಳ್ಳುತ್ತಾ ಬಂದಿದ್ದೇವೆ. ಉಚಿತವಾಗಿ ಈ ಶಿಬಿರದಲ್ಲಿ ಮಹಿಳೆಯರಿಗೆ ಮತ್ತು ಪುರುಷರಿಗೆ ಎಲ್ಲಾ ಪರೀಕ್ಷೆಗಳು ಉಚಿತವಾಗಿ ನೀಡಲು ನುರಿತ ವೈದ್ಯರಿಂದ ಆರೋಗ್ಯ ತಪಾಸಣೆ, ಬಾಯಿ ಕ್ಯಾನ್ಸರ್ ತಪಾಸಣೆ, ಬಿಪಿ, ಸಕ್ಕರೆ ತಪಾಸಣೆ, ಕಣ್ಣು ತಪಾಸಣೆ, ಎಚ್‌ಬಿ ಪರೀಕ್ಷೆ, ಎಲ್‌ಎಫ್‌ಟಿ/ಆರ್‌ಎಫ್‌ಟಿ, ಎಚ್‌ಬಿಎ1ಸಿ ತಪಾಸಣೆ,ಉಚಿತ ಅಭಾ ಕಾರ್ಡ್ ನೋಂದಣಿ ಮಾಡುತ್ತಿದ್ದೇವೆ ದಯವಿಟ್ಟು ಸದುಪಾಯೋಗ ಪಡೆದುಕೊಳ್ಳಲು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಉದ್ಬಾಳ ಗ್ರಾಮ ಪಂಚಾಯಿತಿ ಅದ್ಯಕ್ಷರು ನೀಲಕಂಠಪ್ಪ ಪಿಡಿಓ ಬಸವರಾಜ ಡಾ.ದೌವಲಸಾಬ್ ಡಾ.ಸುನೀಲ್, ಮಹಿಳಾ ವೈದ್ಯೆ ಡಾ.ಸೌಮ್ಯ ದಂತವೈಧ್ಯರು ಡಾ.ನಾಗವೇಣಿ,ಡಾ.ದೇವರಾಜ ಮಸ್ಕಿ ತಾ.ಪಂಐಇಸಿ ಸತೀಶ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂಧಿಗಳು ಹಾಗೂ ಪಿಪಿಹೆಚ್‌ಎಫ್ ಸಿಬ್ಬಂಧಿ ವರ್ಗ ಗ್ರಾಮಸ್ಥರು ಸ್ವಯಂ ಸೇವಕರು ಇದ್ದರು.ಈ ಸಂದರ್ಭದಲ್ಲಿ ಮಲ್ಲೈಕಾ ಅಮೀನ,ಉದ್ಬಾಳ ಗ್ರಾಮ ಪಂಚಾಯಿತಿ ಅದ್ಯಕ್ಷರು ನೀಲಕಂಠಪ್ಪ ಪಿಡಿಓ ಬಸವರಾಜ ಡಾ.ದೌವಲಸಾಬ್ ಡಾ.ಸುನೀಲ್, ಮಹಿಳಾ ವೈದ್ಯೆ ಡಾ.ಸೌಮ್ಯ ದಂತವೈಧ್ಯರು ಡಾ.ನಾಗವೇಣಿ,ಡಾ.ದೇವರಾಜ ಮಸ್ಕಿ ತಾ.ಪಂಐಇಸಿ ಸತೀಶ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂಧಿಗಳು ಹಾಗೂ ಪಿಪಿಹೆಚ್‌ಎಫ್ ಸಿಬ್ಬಂಧಿ ವರ್ಗ ಗ್ರಾಮಸ್ಥರು ಸ್ವಯಂ ಸೇವಕರು ಇದ್ದರು.

## ಪಟ್ಟಣದ ಬಂಗಾರ ಅಭರಣ ಮಾರಾಟಗಾರರಿಗೆ ಜಾಗೃತಿ ಮೂಡಿಸಿದ ಪೊಲೀಸ್ ಅಧಿಕಾರಿಗಳು

ಅಭರಣಗಳು ಕಳ್ಳತನವಾಗದಂತೆ ಅಗತ್ಯ ಜಾಗ್ರತೆ ವಹಿಸಬೇಕು ಅಂಗಡಿಗಳಲ್ಲಿ ಅಗತ್ಯವಾದ ಭದ್ರತ ವ್ಯವಸ್ಥೆ ಮಾಡಿಕೊಳ್ಳಬೇಕು ಬಂಗಾರ ಅಂಗಡಿಯ ಒಳಗಡೆ ಮತ್ತು ಹೊರಗಡೆ ಭದ್ರತೆಗಾಗಿ ಸಿ.ಸಿ. ಟಿವಿ .ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಬೇಕು, ಅಂಗಡಿಯ ಬಾಗಿಲುಗಳನ್ನು ಕಬ್ಬಿಣದಿಂದ ಗಟ್ಟಿ ಮುಟ್ಟಾಗಿ ಇರುವಂತೆ ಮಾಡಿಸಬೇಕು ಅಂಗಡಿಯನ್ನು ಬಂದ್ ಮಾಡಿಕೊಂಡು ಹೋಗುವಾಗ ಭಾರಿ ಬೆಲೆಬಾಳುವ ಆಭರಣಗಳನ್ನು ಅಂಗಡಿಗಳಲ್ಲಿ ಬಿಡದೆ ಅವುಗಳನ್ನು ತಮ್ಮ ಮನೆಗಳಿಗೆಣಟಿಜಜಜಿಟಿಜಜ ತೆಗೆದುಕೊಂಡು ಹೋಗಬೇಕು, ತಮ್ಮ ಅಂಗಡಿಗಳ ಹೊರಗಡೆ ಹಾಗೂ ಒಳಗಡೆ ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಅವರ ಕುರಿತು ಕೂಡಲೇ ಪೊಲೀಸ್ ಠಾಣೆಗೆ ಅಥಾವ ಪೊಲೀಸ್ ಸಹಾಯವಾಣಿ ವಾಹನ ಸಂಖ್ಯೆ 112 ಕ್ಕೆ ಕರೆಮಾಡಿ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಮಾನ್ವಿ ಪೊಲೀಸ್ ಠಾಣೆ ವ್ಯಾಪ್ತಿಯ ವಿವಿಧ ಬಂಗಾರದ ಅಭರಣ ಮಳಿಗೆಗಳಿಗೆ ಭೇಟಿ ನೀಡಿ ಸುರಕ್ಷೇತೆಗಾಗಿ ನೋಟೀಸ್ ನೀಡಿ ಜಾಗೃತಿ ಮೂಡಿಸಿದರು.

ಪೊಲೀಸ್ ಸಿಬ್ಬಂದಿಗಳಾದ ಬಸವರಾಜ,ಚರಣರಾಜ, ರವಿಗೌಡ ಸೇರಿದಂತೆ ಇನ್ನಿತರರು ಇದ್ದರು.

## ಸಮಾಜದ ಸಮಸ್ಯೆಗಳಿಗೆ ಸತ್ಯದ ಅನಾವರಣವೇ ಪರಿಹಾರ



**ತುಮಕೂರು, ಡಿ. 30–** ಯಾವ ಶಿಕ್ಷಣದಿಂದ ನಮ್ಮ ಶಕ್ತಿಗಳು ಜಾಗೃತವಾಗಬಲ್ಲವೋ ಅದೇ ಸಂಸ್ಕಾರ. ಬಾಹುಬಲ, ಬುದ್ಧಿಬಲ, ಚಿಂತನ ಬಲಗಳು ಅತ್ಯಗತ್ಯ. ಸ್ವಾಮಿ ವಿವೇಕಾನಂದರು ಶಕ್ತಿಶಾಲಿಗಳೂ ಪೌರುಷವಂತರೂ ಆದ ಯುವ ಜನತೆಯನ್ನು ಬಯಸಿದ್ದರು. ಶಾಂತಿಯಿಂದ ಗೌರವದಿಂದ ಬದುಕಲು ಅರ್ಹತೆ ಬೇಕು. ಸಮಾಜದ ಸಮಸ್ಯೆಗಳಿಗೆ ಪರಿಹಾರ ಸತ್ಯದ ಅನಾವರಣದಿಂದ ಸಾಧ್ಯ. ಇದಕ್ಕೆ ಪ್ರೇರಣೆ ಹಾಗೂ ಮಾರ್ಗದರ್ಶನ ನೀಯುವ ಸಂತರಿದ್ದಾರೆ, ಸದ್ಗ್ರಂಥಗಳಿವೆ, ಆಶ್ರಮಗಳಿವೆ. ಸಾಮಾನ್ಯರಂತೆ ಬದುಕುತ್ತಿದ್ದವರ ಜೀವನವನ್ನು ಅಸಾಮಾನ್ಯತೆಯೆಡೆಗೆ ಕೊಂಡೊಯ್ಯಲು ಚಿಂತಶೀಲತೆ ಅತ್ಯವಶ್ಯಕ,"ಎಂದು ಗದಗ–ವಿಜಯಪುರ ರಾಮಕೃಷ್ಣ–ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಪೂಜ್ಯ ಸ್ವಾಮಿ ನಿರ್ಭಯಾನಂದಜೀ ಸರಸ್ವತೀ ಅಭಿಪ್ರಾಯಪಟ್ಟರು.

ತುಮಕೂರು ರಾಮಕೃಷ್ಣ–ವಿವೇಕಾನಂದಾಶ್ರಮದಲ್ಲಿ ಆಯೋಜಿಸಲಾಗಿದ್ದ ಕೃಪಾಮಯಿ ಮಕ್ಕಳ ಬಳಗದ 20ನೇ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಮಾತನಾಡಿ, ಕೌಟುಂಬಿಕ ವ್ಯವಸ್ಥೆಯ ಮಹತ್ವವನ್ನು ಮನಗೊಂಡಿದ್ದರಿಂದಲೇ ಭಾರತ ತತ್ತ್ವಾಧಾರಿತ ರಾಷ್ಟ್ರವಾಯಿತು, ಸಂಸ್ಕೃತಿಯ ಕೇಂದ್ರವಾಯಿತು. ಮಕ್ಕಳಲ್ಲಿ ಉನ್ನತ ಆಲೋಚನೆಗಳನ್ನು, ಭಾವನೆಗಳನ್ನು ಪ್ರಚೋದಿಸಬೇಕು. ಮಕ್ಕಳನ್ನು ಉತ್ತಮ ರೀತಿಯಲ್ಲಿ ಉತ್ತೇಜಿಸಿ ದಿಟ್ಟತನದಿಂದ ಧ್ಯೇಯಾದರ್ಶಗಳ ಮಾರ್ಗದಲ್ಲಿ ನಡೆಯುವಂತೆ ಮಾಡುವುದು ಪೋಷಕರ ಕರ್ತವ್ಯ.ಸ್ವಾಭಿಮಾನ ಆತ್ಮ ಗೌರವವನ್ನು ಮಕ್ಕಳಲ್ಲಿ ಬೆಳಸಬೇಕು. ಒಂದು ತಲೆಮಾರಿನ ತಾಯಂದಿರು ಯೋಗ್ಯ ರೀತಿಯಲ್ಲಿ ಕಾರ್ಯ ನಿರ್ವಹಿಸಿದರೆ ಅರ್ಧ ಶತಮಾನದಷ್ಟು ಕಾಲ ಸಮಾಜ ಮತ್ತು ದೇಶ ಆರೋಗ್ಯಕರವಾಗಿ ಶಾಂತಿಯಿಂದ ಇರುತ್ತದೆ ಎಂದರು.

ಸಮಾಜ ಸೇವಕರಾದ ಡಾ.ಆರ್.ಎಲ್. ರಮೇಶ್‌ಬಾಬು ರವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ತುಮಕೂರು ರಾಮಕೃಷ್ಣ–ವಿವೇಕಾನಂದಾಶ್ರಮದ ಸ್ವಾಮಿ ಧೀರಾನಂದಜೀ ರವರು ಆಶೀರ್ವಚನ ನೀಡಿದರು.

ಕೃಪಾಮಯಿ ಮಕ್ಕಳ ಬಳಗದ ಚಿ. ಈಶಾನ 'ನಾವಾಡುವ ಮಾತೇ ಶ್ರೀಶಾರದಾಮಾತೆ' ಎಂಬ ವಿಷಯ ಕುರಿತು ಮಾತನಾಡಿದನು.

ಕೃಪಾಮಯಿ ಮಕ್ಕಳ ಬಳಗದ ಮಕ್ಕಳು ಹಾಗೂ ಕೃಪಾಮಯಿ ಸತ್ಸಂಗ ಕೇಂದ್ರದ ತಾಯಂದಿರು ಭಗವನ್ನಾಮ ಸಂಕೀರ್ತನೆಯನ್ನು ನೆರವೇರಿಸಿಕೊಟ್ಟರು. ಶ್ರೀ ಗುರುಸ್ವಾಮಿ ಹಾಗೂ ಶ್ರೀ ರುದ್ರೇಶ್ ಹಾರ್ಮೋನಿಯಂ ಹಾಗೂ ತಬಲದಲ್ಲಿ ಸಹಕರಿಸಿದರು.

ಕು.ಚೇತನಾ ಅತಿಥಿಗಳನ್ನು ಪರಿಚಯಿಸಿ ಮತ್ತು ಸ್ವಾಗತಿಸಿದರು. ಸುನಂದ ರಂಗನಾಥ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಇಂದಿರಮ್ಮ ಕಾರ್ಯಕ್ರಮ ನಿರೂಪಿಸಿದರು. ದಾಕ್ಷಾಯಣಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸುಮಾರು ಐದುನೂರು ಭಕ್ತರು, ಪೋಷಕರು, ಮಕ್ಕಳು ಭಾಗವಹಿಸಿದ್ದರು.

## ಗುರುಗಳಿಂದ ಮಾತ್ರ ಜ್ಞಾನ ಮತ್ತು ಮೌಲ್ಯ ಬೋಧಿಸುವ ಸಾಮರ್ಥ್ಯ : ಡಿ.ವಿ.ಸದಾನಂದ ಗೌಡ




**ಸುಳ್ಯ,ಡಿ.30–**ಜ್ಞಾನ ಮತ್ತು ಮೌಲ್ಯಗಳನ್ನು ಭೋಧಿಸುವ ಸಾಮರ್ಥ್ಯ ಇರುವುದು ಗುರುಗಳು ಮಾತ್ರ. ಅಂತಹ ಮೌಲ್ಯಗಳು ಇರುವ ಶಿಕ್ಷಕ ರತ್ನಗಳನ್ನು ಖರೀದಿ ಮಾಡಲು ಸಾದ್ಯವಾಗುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಹೇಳಿದರು.

ಸುಳ್ಯ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯುತ್ತಿರುವ ಅಮೃತಮಹೋತ್ಸವದ ಅಂಗವಾಗಿ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಗೌರವಿಸಿ ಮಾತನಾಡಿದರು. ಕಲ್ಲುಗಳನ್ನು ಕೆತ್ತಿ ಶಿಲ್ಪಗಳಾಗಿ ಬದಲಾಯಿಸಿದ ಕೀರ್ತಿ ಗುರುಗಳಿಗೆ ಸಲ್ಲಬೇಕು. ಭಗವಂತನಿಂದ ಆಗದ ಕೆಲಸಗಳನ್ನು ಶಿಕ್ಷಕರು ಮಾಡುತ್ತಿದ್ದಾರೆ. ಕೇವಲ ಸಂಘರ್ಷಕ್ಕಾಗಿ ಇಳಿದವನು ಗೆಲ್ಲಲು ಸಾಧ್ಯವಿಲ್ಲ. ಅವಮಾನವಾದಾಗ ಮಾತ್ರ ಮುಂದಿನ ದಾರಿ ಸಿಗಲು ಸಾಧ್ಯವಿದೆ. ಒಂದು ಕುಗ್ರಾಮವಾಗಿದ್ದ ಮಂಡೆಕೋಲಿನಿಂದ ನನ್ನನ್ನು ದೆಹಲಿಯ ಸಂಸತ್ತಿಗೆ ಏರಿಸಿದ ಕೀರ್ತಿ ಮುಂಭಾಗದಲ್ಲಿ ಕುಳಿತಿರುವ ಶಿಕ್ಷಕರಿಗೆ ಸಲ್ಲುತ್ತದೆ. ತಾಂತ್ರಿಕ ಸಮಾಜದಲ್ಲಿ ಸಮಾಜದಲ್ಲಿ ಮನುಷ್ಯತ್ವ ಕಡಿಮೆ ಆಗುತ್ತಿದೆ.

ಸಮಾಜದಲ್ಲಿ ಪ್ರೀತಿ, ವಿಶ್ವಾಸ, ಸಂಸ್ಕಾರ, ಸಂಸ್ಕೃತಿ ಕಡಿಮೆಯಾಗುತ್ತಿದೆ. ಸಂಸ್ಕಾರ ಕಲಿಸುವ ಶಾಲೆಗಳು ಸಮಾಜದಲ್ಲಿ ಉನ್ನತವಾಗಿ ಬೆಳೆಯುತ್ತದೆ. ಬಾಲ್ಯದಲ್ಲಿ ಸಿಗುವ ಶಿಕ್ಷಣ ಅಂತಹ ಶಾಲೆಯಲ್ಲಿ ಕಲಿತವರು ಉನ್ನತ ಸ್ಥಾನವನ್ನು ಪಡೆಯುತ್ತಾರೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸಚಿವ ಎಸ್ ಅಂಗಾರ ವಹಿಸಿ ಮಾತನಾಡಿ ಸುಳ್ಯದ ಜೂನಿಯರ್ ಕಾಲೇಜು ಹಲವು ಮಂದಿ ಸಾಧಕರನ್ನು ಕೊಡುಗೆಯಾಗಿ ನೀಡಿದೆ. ಇಲ್ಲಿ ಕಲಿತಂತಹ ನೂರಾರು ಮಂದಿ ಶಾಲೆಗೆ ಹಲವು ರೀತಿಯಲ್ಲಿ ಕೊಡುಗೆ ನೀಡಿದ್ದಾರೆ. ಅಂತವರನ್ನು ಗುರುತಿಸುವ ಕಾರ್ಯ ಶ್ಲಾಘನೀಯ ಎಂದರು.

ಮುಖ್ಯ ಅತಿಥಿಗಳಾಗಿ ವಿಶ್ರಾಂತ ಕುಲಪತಿ ಡಾ.ಚಿದಾನಂದ ಗೌಡ ಕೊಳಂಬೆ, ನಿವೃತ್ತ ಐಎಫ್ ಎಸ್ ಅಧಿಕಾರಿ ಸುಂದರ ನಾಯ್ಕ್, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಗಿರೀಶ್ ಭಾರದ್ವಜ್ ಮಾತನಾಡಿದರು.

ವೇದಿಕೆಯಲ್ಲಿ ಅಮೃತ ಮಹೋತ್ಸವ ಸಮಿತಿ ಅಧ್ಯಕ್ಷ ಸವಣೂರು ಸೀತರಾಮ ರೈ, ಕಾಲೇಜು ಅಭಿವೃದ್ಧಿ ಸಮಿತಿ ಕಾರ್ಯಾಧ್ಯಕ್ಷ ಲಿಂಗಪ್ಪ ಗೌಡ ಕೇರ್ಪಳ, ಕಾಲೇಜಿನ ಪ್ರಾಂಶುಪಾಲ ಮೋಹನ್ ಕುಮಾರ್ ಬೊಮ್ಮೆಟ್ಟಿ, ಅಮೃತ ಮಹೋತ್ಸವ ಸಮಿತಿ ಪ್ರಧಾನ ಕಾರ್ಯದರ್ಶಿ ಎಂ.ಬಿ ಸದಾಶಿವ, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ಮಂಜುಳ ಬಡಿಗೇರ್ , ಹಿರಿಯ ವಿದ್ಯಾರ್ಥಿ ಸಂಘದ ಪ್ರಧಾನ ಕಾರ್ಯದರ್ಶಿ ಶಿವಪ್ರಸಾದ್ ಕೇರ್ಪಳ, ಉಪ ಪ್ರಾಂಶುಪಾಲ ಪ್ರಕಾಶ್ ಮೂಡಿತ್ತಾಯ ಉಪಸ್ಥಿತರಿದ್ದರು.ಪಿ.ಬಿ ಸುಧಾಕರ ರೈ ಸ್ವಾಗತಿಸಿ ಪ್ರಾಸ್ತವಿಕ ಮಾತನಾಡಿದರು. ಶಿವಪ್ರಸಾದ್ ಆಲೆಟ್ಟಿ ವಂದಿಸಿ, ಕಾರ್ಯಕ್ರಮ ನಿರೂಪಿಸಿದರು.

## ಕನ್ನಡ ನಾಡಿಗೆ ಕುವೆಂಪು ಅವರ ಕೊಡುಗೆ ಅಪಾರ



**ಸೈದಾಪುರ:ಡಿ.30:**ಕನ್ನಡ ನಾಡು ನುಡಿಗೆ ರಾಷ್ಟ್ರಕವಿ ಕುವೆಂಪುರವರ ಕೊಡುಗೆ ಅಪಾರವಾಗಿದೆ ಎಂದು ಮುಖ್ಯಗುರು ಲಿಂಗಾರೆಡ್ಡಿ ನಾಯಕ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾ ವರ್ಧಕ ಸಂಸ್ಥೆಯ ವಿವಿಧ ವಿಭಾಗಗಳಿಂದ ಹಮ್ಮಿಕೊಂಡ ವಿಶ್ವಮಾನವ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನಾಚರಣೆ ಕಾರ್ಯ ಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಜೈ ಭಾರತ ಜನನಿಯ ತನುಜಾತೆ ಜಯ ಹೇ ಕರ್ಣಾಟಕ ಮಾತೆ ಎಂದು ಮೊಳಗುವ ನಾಡಗೀ ತೆಯಿಂದ ಹಿಡಿದು ಶ್ರೀ ರಾಮಾಯಣ ದರ್ಶನಂ ಎಂಬ ಪ್ರಮುಖ ಗ್ರಂಥ ರಚನೆಯ ಕೀರ್ತಿ ಸೇರಿದಂತೆ ಕನ್ನಡ ನಾಡಿಗೆ ಮೊಟ್ಟ ಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟ ಗರಿಮೆ ಕುವೆಂಪು ಅವರಿಗೆ ಸಲ್ಲುತ್ತದೆ. ಸಾಕಷ್ಟು ಕೃತಿ, ಕಥೆ, ಕಾದಂಬರಿಗಳನ್ನು ರಚಿಸಿದ್ದಾರೆ. ನಾಡು, ನುಡಿಯ ಬಗಗೆ ಅವರಲ್ಲಿರುವ ಅಭಿಮಾನ ನಮಗೆ ಮಾದರಿಯಾಗಬೇಕು ಎಂದು ಹೇಳಿದರು. ಪ್ರಾಂಶುಪಾಲ ಹಂಪಣ್ಣ ಸಜ್ಜನಶೆಟ್ಟಿ, ಕರಬಸಯ್ಯ ದಂಡಿಗಿಮಠ, ಸಾಬಯ್ಯ ರಾಯಪನ್ನೋರ, ರಾಚಯ್ಯ ಸ್ವಾಮಿ ಬಾಡಿಯಾಲ, ಚಂದ್ರಶೇಖರ ಡೊಣ್ಣೆಗೌಡ ಸೇರಿದಂತೆ ಇತರರಿದ್ದರು.

## ಭವ್ಯ ಭಾರತದ ಭವಿಷ್ಯಕ್ಕೆ ವಾಜಪೇಯಿ ಕೊಡುಗೆ ಶಾಶ್ವತ

**ಕೊರಟಗೆರೆ, ಡಿ.30–** ಭವ್ಯ ಭಾರತದ ಭವಿಷ್ಯಕ್ಕೆ ದಿ. ಅಟಲ್ ಬಿಹಾರಿ ವಾಜಪೇಯಿ ಅವರು ಕೊಟ್ಟಂತ ಕೊಡುಗೆಯನ್ನು ನೂರಾರು ವರ್ಷಗಳ ಕಾಲ ಶಾಶ್ವತವಾಗಿ ಉಳಿಯುವಂತ ಕೆಲಸಗಳನ್ನು ಮಾಡಿದ್ದಾರೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಸಚಿವ ವಿ. ಸೋಮಣ್ಣ ಹೇಳಿದರು.



ಪಟ್ಟಣದ ಪಂಚಾಜನ್ಯ ಕಚೇರಿಯಲ್ಲಿ ಎನ್‌ಡಿಎ ವತಿಯಿಂದ ಭಾರತ ರತ್ನ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನದ ಅಂಗವಾಗಿ ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಭಾರತ ರತ್ನ, ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಪ್ರಧಾನಿ ಆಗಿದ್ದ ಸಂದರ್ಭದಲ್ಲಿ ಚತುಷ್ಪಥ ರಸ್ತೆ, ಗ್ರಾಮ ಸಡಕ್, ಸೇರಿದಂತೆ ಗ್ರಾಮ ವಾಸಿಗಳು ಬದಕಬೇಕು ಎನ್ನುವ ಉದ್ದೇಶದಿಂದ ದೂರದೃಷ್ಟಿ ಹೊಂದಿದ ಏಕೈಕ ಪ್ರಧಾನಿ ಅದು ಭಾರತ ರತ್ನ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು, ಅವರ ಮಾರ್ಗದರ್ಶನದಲ್ಲಿ ಮತ್ತು ವಾಜಪೇಯಿ ಅವರ ಆಶಯಗಳನ್ನು ಹೊಂದಿರುವ ನಾಯಕ ಈ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿಯುವರು ಎಂದರೆ ತಪ್ಪಾಗುವುದಿಲ್ಲ ಎಂದು ತಿಳಿಸಿದರು.

2027ರ ಒಳಗೆ ತುಮಕೂರು ರಾಯದುರ್ಗ ರೈಲ್ವೆ ಕಾಮಗಾರಿ ಮುಗಿಸಿ ಈ ಭಾಗದ ಸಾಮಾನ್ಯ ಜನರು ರೈಲಿನಲ್ಲಿ ಓಡಾಡುವವಂತೆ ಮಾಡುತ್ತೇನೆ. ಈಗಾಗಲೇ ಆಂಧ್ರದಿಂದ ಪಾವಗಡದವರೆಗೂ ಮಾರ್ಚ್ ಒಳಗೆ ರೈಲು ಸಂಚಾರ ಮಾಡಲಿದೆ. ಜೂನ್ ಒಳಗೆ ಮಡಕಸಿರಾ ಬರಲಿದೆ. ಎಲ್ಲ ಕಾಮಗಾರಿಗಳು ಶರ ವೇಗದಲ್ಲಿ ನಡೆಯುತ್ತಿದ್ದು, ಇತ್ತ ತುಮಕೂರಿನ ಊರುಕೆರೆ ಹತ್ತಿರ ಕಾಮಗಾರಿ ಮುಗಿಸಲಾಗಿದೆ ಹಾಗೂ ಅದರ ಪ್ರಾಯೋಗಿಕವಾಗಿ ನಾನು ಓಡಾಡಿದ್ದೇನೆ. ಕೊರಟಗೆರೆ–ಮಧುಗಿರಿ ತಾಲ್ಲೂಕಿನ ಭೂ ಸ್ವಾಧೀನ ಪ್ರಕ್ರಿಯೆ ಮುಗಿದಿದೆ. ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಕಾಮಗಾರಿ ಪ್ರಾರಂಭ ಮಾಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಪಕ್ಷದ ತಾಲ್ಲೂಕು ಅಧ್ಯಕ್ಷ ಕಾಮರಾಜು, ಬಿಜೆಪಿ ಮಂಡಲ ಅಧ್ಯಕ್ಷ ರುದ್ರೇಶ್, ಪ್ರಧಾನ ಕಾರ್ಯದರ್ಶಿ ಮಹೇಂದ್ರಬಾಬು, ಮುಖಂಡರಾದ ಸ್ವಾಮಿ, ಲಕ್ಷ್ಮಿನಾರಾಯಣ್, ಚೇತನ್, ದಯಾನಂದ್, ರಂಗರಾಜು, ರಂಜಿತ್, ಸಾಕಣ್ಣ, ಹನುಮಂತರಾಜು, ಹರೀಶ್, ದಾಡಿ ವೆಂಕಟೇಶ್, ರವಿನಂದನ್, ಪ್ರವೀಣ್, ರಾಜೇಂದ್ರ, ಸಿದ್ದನಂಜಪ್ಪ, ಚಂದ್ರಣ್ಣ ಮತ್ತಿತರರು ಭಾಗವಹಿಸಿದ್ದರು.

## ಬೀದಿಬದಿ ವ್ಯಾಪಾರಿಗಳ ಸಬಲೀಕರಣಕ್ಕೆ ಕಾಂಗ್ರೆಸ್ ಪಣ



**ಹುಳಿಯಾರು, ಡಿ. 30–** ಸಮಾಜದ ಕಟ್ಟಕಡೆಯ ಶ್ರಮ ಜೀವಿಗಳಿಗೂ ಸರ್ಕಾರದ ಸೌಲಭ್ಯಗಳು ತಲುಪಬೇಕು ಹಾಗೂ ಅವರು ಘನತೆಯಿಂದ ಬದುಕಬೇಕು ಎಂಬ ಉದ್ದೇಶದಿಂದ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಬೀದಿಬದಿ ವ್ಯಾಪಾರಿಗಳ ವಿಭಾಗದ ವತಿಯಿಂದ ಹುಳಿಯಾರು ಪಟ್ಟಣದ ವ್ಯಾಪಾರಿಗಳಿಗೆ ಅಧಿಕೃತ ಗುರುತಿನ ಚೀಟಿ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು

ಚಿ.ನಾ.ಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ. ಚಂದ್ರಶೇಖರ್ ಮಾತನಾಡಿ, ವ್ಯಾಪಾರಿಗಳ ಮೇಲೆ ನಡೆಯುವ ದೌರ್ಜನ್ಯ ತಡೆಯಲು ಮತ್ತು ಮೂಲಭೂತ ಸೌಕರ್ಯಗಳಿಗಾಗಿ ಧ್ವನಿ ಎತ್ತಲು ಸಂಘಟನೆ ಅತಿ ಮುಖ್ಯ. ವ್ಯಾಪಾರಿಗಳು ಒಂದಾಗ ಮಾತ್ರ ನ್ಯಾಯ ಪಡೆಯಲು ಸಾಧ್ಯ. ಪಿಎಂ ಸ್ವನಿಧಿ ಯೋಜನೆಯಡಿ ಸಿಗುವ ಬಡ್ಡಿ ರಹಿತ ಸಾಲಗಳನ್ನು ಸದುಪಯೋಗಪಡಿಸಿಕೊಂಡು ವ್ಯಾಪಾರ ವಿಸ್ತರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಸ್ಥಳೀಯ ಆಡಳಿತ ಅಥವಾ ಪೊಲೀಸ್ ಇಲಾಖೆಯಿಂದ ಯಾವುದೇ ಕಿರುಕುಳವಾಗದಂತೆ ಕಾಂಗ್ರೆಸ್ ಪಕ್ಷವು ವ್ಯಾಪಾರಿಗಳ ಪರವಾಗಿ ನಿಲ್ಲಲಿದೆ ಎಂದು ಧೈರ್ಯ ತುಂಬಿದರು.

ಹುಳಿಯಾರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಿ.ಟಿ. ಚಿಕ್ಕಣ್ಣ ಮಾತನಾಡಿ, ಬೆಳಗ್ಗೆಯಿಂದ ಸಂಜೆಯವರೆಗೆ ಬಿಸಿಲು–ಮಳೆ ಎನ್ನದೆ ದುಡಿಯುವ ವ್ಯಾಪಾರಿಗಳು ಶೋಷಣೆಗೆ ಒಳಗಾಗಬಾರದು. ಅವರ ಕಿರುಕುಳ ತಪ್ಪಿಸಲು ಕಾಂಗ್ರೆಸ್‌ನಲ್ಲಿ ಪ್ರತ್ಯೇಕ ವಿಭಾಗವನ್ನೇ ತೆರೆಯಲಾಗಿದೆ. ಯಾವುದೇ ಸಮಸ್ಯೆ ಎದುರಾದಾಗ ಸಂಘಟನೆಯು ಪೊಲೀಸ್ ಠಾಣೆ ಅಥವಾ ಸಂಬಂಧಿತ ಕಚೇರಿಗಳಿಗೆ ಭೇಟಿ ನೀಡಿ ವ್ಯಾಪಾರಿಗಳ ಪರವಾಗಿ ಕಾನೂನಾತ್ಮಕವಾಗಿ ಹೋರಾಡಲಿದೆ ಎಂದರು.

ಕಾರ್ಯಕ್ರಮದಲ್ಲಿ ಎಸ್‌ಸಿ ಘಟಕದ ಅಧ್ಯಕ್ಷ ನರಸಿಂಹಮೂರ್ತಿ, ಬೀದಿಬದಿ ವ್ಯಾಪಾರಿಗಳ ವಿಭಾಗದ ಚಿಕ್ಕನಾಯಕನಹಳ್ಳಿ ತಾಲ್ಲೂಕು ಅಧ್ಯಕ್ಷ ಲಕ್ಷ್ಮೀಪುರ ಮಂಜುನಾಥ್, ಉಪಾಧ್ಯಕ್ಷ ಮೆಹಬೂಬ್ ಸಾಬ್ ಸೇರಿದಂತೆ ಸ್ಥಳೀಯ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.

## ಮಕ್ಕಳ ಪ್ರತಿಭೆ ಪ್ರೋತ್ಸಾಹಿಸಲು ಕರೆ

**ತುರುವೇಕೆರೆ, ಡಿ. 30–** ಪೋಷಕರು ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವನ್ನು ಮಾಡಬೇಕು ಎಂದು ಮಾಜಿ ಶಾಸಕ ಮಸಾಲಾ ಜಯರಾಮ್ ಹೇಳಿದರು.



ಪಟ್ಟಣದ ಮುತ್ತುರಾಯನಗರದಲ್ಲಿರುವ ರಿಯಾ ಪ್ಲೇಹೋಂ ಹಾಗೂ ವಿಶ್ವವಿಜಯ ವಿದ್ಯಾಶಾಲೆಯ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಶೈಕ್ಷಣಿಕವಾಗಿ ಮಾತ್ರವಲ್ಲ ಪಠ್ಯೇತರ ಚಟುವಟಿಕೆಯಲ್ಲೂ ತೊಡಗಿಸಿಕೊಳ್ಳಬೇಕು, ಮಕ್ಕಳಲ್ಲಿನ ಸರ್ವಾಂಗೀಣ ಪ್ರಗತಿಗೆ ಶಾಲಾ ವಾರ್ಷಿಕೋತ್ಸವ, ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಗಳು ಅತ್ಯುತ್ತಮ ವೇದಿಕೆಯಾಗಬೇಕಿದೆ. ಪೋಷಕರು ತಮ್ಮ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿದಾಗ ಮಾತ್ರ ಅವರ ವ್ಯಕ್ತಿತ್ವ ವಿಕಸನಗೊಳ್ಳಲು ಸಹಕಾರಿಯಾಗುತ್ತದೆ. ಮಕ್ಕಳ ಆಸಕ್ತಿ ಒಂದೆಡೆಯಾಗಿ, ನಿಮ್ಮ ಆಶಯ ಮತ್ತೊಂದಾದರೆ ಮಕ್ಕಳ ಭವಿಷ್ಯವೂ ಮಸುಕಾಗುತ್ತದೆ ಎಂಬುದನ್ನು ಪೋಷಕರು ಅರಿತುಕೊಳ್ಳಬೇಕು. ಮಕ್ಕಳ ಆಸಕ್ತಿಯ ಚಟುವಟಿಕೆಯನ್ನು ಪ್ರೋತ್ಸಾಹಿಸುವುದರ ಜತೆಗೆ ಶೈಕ್ಷಣಿಕವಾಗಿಯೂ ಉತ್ತಮ ಸಾಧನೆ ಮಾಡುವಂತೆ ಪ್ರೇರೇಪಿಸಿದಾಗ ಯಶಸ್ಸನ್ನು ಸಾಧಿಸಲು ಸಾಧ್ಯ ಎಂದರು.

ಮಕ್ಕಳಿಗೆ ಕೇವಲ ಪಠ್ಯದಲ್ಲಿನ ಶಿಕ್ಷಣ ಮಾತ್ರವಲ್ಲದೆ ಸಂಸ್ಕಾರ, ಮೌಲ್ಯಯುತ ಶಿಕ್ಷಣದ ಅಗತ್ಯವಿದೆ. ಸಂಸ್ಕಾರವಿಲ್ಲದ ವಿದ್ಯೆ ನಿರರ್ಥಕವಾಗಲಿದೆ. ಈಗಿನ ಮಕ್ಕಳು ಮೊಬೈಲ್, ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಒಲವು ಹೊಂದಿದ್ದಾರೆ. ಇದರಿಂದ ಅನುಕೂಲವಾಗುವಷ್ಟೇ ಅನಾನುಕೂಲವೂ ಇದೆ. ಈ ಬಗ್ಗೆ ಮಕ್ಕಳ ಚಟುವಟಿಕೆ, ಚಲನವಲನದ ಬಗ್ಗೆ ಪೋಷಕರು ಗಮನಹರಿಸಬೇಕು. ಆಧುನಿಕ ತಂತ್ರಜ್ಞಾನದ ಬಳಕೆ ನಮ್ಮ ಯಶಸ್ಸಿಗೆ ಕಾರಣವಾಗಬೇಕೇ ವಿನಃ ನಮ್ಮ ಅವನತಿಗೆ ಕಾರಣವಾಗಬಾರದು. ಮಕ್ಕಳಲ್ಲಿ ನಮ್ಮ ಪಾರಂಪರಿಕ ಸಂಸ್ಕೃತಿ, ಸಂಸ್ಕಾರ, ಮೌಲ್ಯಗಳನ್ನು ತಿಳಿಸಿ ಅವರನ್ನು ಸಂಸ್ಕಾರವಂತ ನಾಗರೀಕರನ್ನಾಗಿ ಮಾಡಬೇಕಾದ ಜವಾಬ್ದಾರಿ ನಮ್ಮದಾಗಿದೆ. ಗಳಿಕೆ, ಉದ್ಯೋಗ ಸಂಪಾದನೆಯಷ್ಟೇ ಜೀವನದ ಗುರಿಯಾಗಬಾರದು. ಅದನ್ನೂ ಮೀರಿ ಸಮಾಜದಲ್ಲಿ ಸತ್ಪ್ರಜೆಯಾಗಿ, ದೇಶಕ್ಕೆ ಕೊಡುಗೆಯನ್ನು ನೀಡುವಂತಹ ಸಾಧಕನಾಗುವ ನಿಟ್ಟಿನಲ್ಲಿ ಮಕ್ಕಳನ್ನು ಬೆಳೆಸಬೇಕಿದೆ. ಈ ನಿಟ್ಟಿನಲ್ಲಿ ಮಕ್ಕಳಿಗೆ ಶಿಕ್ಷಣದ ಜತೆಗೆ ಸಮಾಜದಲ್ಲಿ ಆತ್ಮಸ್ಥೈರ್ಯದಿಂದ ಬದುಕುವ ಶಕ್ತಿಯನ್ನು ಹಾಗೂ ಸಂಸ್ಕಾರ, ಮೌಲ್ಯಯುವ ಶಿಕ್ಷಣವನ್ನು ವಿಶ್ವವಿಜಯ ವಿದ್ಯಾಶಾಲೆ ಮಾಡುತ್ತಿರುವುದು ಶ್ಲಾಘನೀಯ ವಿಚಾರವಾಗಿದೆ ಎಂದರು.

ಪುಟಾಣಿ ಮಕ್ಕಳು ವಿವಿಧ ವೇಷ ಭೂಷಣಗಳನ್ನು ತೊಟ್ಟು ನೃತ್ಯ ಮಾಡುವ ಮೂಲಕ ನೆರೆದಿದ್ದ ಪೋಷಕರು, ನಾಗರೀಕರನ್ನು ರಂಜಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ಶಾಲೆಯ ಅಧ್ಯಕ್ಷ ಹೆಚ್.ವಿ. ಪ್ರವೀಣ್‌ಗೌಡ ವಹಿಸಿದ್ದರು. ಶಾಲೆಯ ಕಾರ್ಯದರ್ಶಿ ವಿಜಯಲಕ್ಷ್ಮೀವಿಶ್ವೇಶ್ವರಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ್, ಪಪಂ ಮಾಜಿ ಅಧ್ಯಕ್ಷರಾದ ಸ್ವಪ್ನ ನಟೇಶ್, ಚಿದಾನಂದ್, ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಇಂದಿರಾ ಪ್ರಭಾಕರ್, ಕರ್ಣಾಟಕ ಬ್ಯಾಂಕ್ ವ್ಯವಸ್ಥಾಪಕ ಅಮರೇಶ್, ಮುಖಂಡರಾದ ಕಾಂತರಾಜು, ಸೋಮಶೇಖರ್, ವಿ.ಬಿ.ಸುರೇಶ್ ಸೇರಿದಂತೆ ಶಾಲೆಯ ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಯುವ ಮಾರ್ಗ
www.yuvamarga.com Yuva Marga yuva_marga_

## ಕಲ್ಯಾಣ ಕಲಬುರಗಿ ಉತ್ಸವ



**ಕಲಬುರಗಿ:ಡಿ.30–** ನಗರದ ಕನ್ನಡ ಭವನದ ಆವರಣದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ ಶೆಟ್ಟಿ ಬಣ) (ಕನ್ನಡ ಪರ ಸಂಘಟನೆಗಳ ಒಕ್ಕೂಟ) ಉತ್ತರ ಕರ್ನಾಟಕ ನೇತೃತ್ವದಲ್ಲಿ ಕನ್ನಡ ಅಭಿಮಾನ ಉತ್ಸವಗಳು 2025 ಹಾಗೂ 20ನೇ ವರ್ಷದ ಕಲ್ಯಾಣ ಕಲಬುರಗಿ ಉತ್ಸವ ಹಾಗೂ ಕಲ್ಯಾಣ ಕಲಬುರಗಿ ಸಿರಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಗಣ್ಯರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ ಸದಸ್ಯ ಶಶೀಲ ನಮೋಶಿ, ಹಿರಿಯ ಹೋರಾಟಗಾರ ಲಕ್ಷ್ಮಣ ದಸ್ತಿ, ಕಾಮಿಡಿ ಕಿಲಾಡಿಗಳಾದ ಸಂಜು ಬಸಯ್ಯ, ಪಲ್ಲವಿ ಮುರಗೋಡ, ಶ್ರೀಗುರು ಕಾಲೇಜಿನ ಮುಖ್ಯಸ್ಥ ನಿತೀನ ನಾಯಕ, ಕಾಂಗ್ರೆಸ್ ಮುಖಂಡ ನೀಲಕಂಠರಾವ ಮೂಲಗೆ, ಉತ್ತರ ಕರ್ನಾಟಕ ಅಧ್ಯಕ್ಷ ಡಾ. ಶರಣು ಬಿ. ಗದ್ದುಗೆ, ಕಲ್ಯಾಣ ಕರ್ನಾಟಕ ಅಧ್ಯಕ್ಷ ಅಭಿಷೇಕ ಬಾಲಾಜಿ, ಕ.ಕ ಪ್ರಧಾನ ಕಾರ್ಯದರ್ಶಿ ಗೋಪಾಲ ನಾಟೀಕಾರ, ಎಂ.ಎನ್.ದೇಸಾಯಿ ಪದವಿ ಮಹಾವಿದ್ಯಾಲಯದ ಅಧ್ಯಕ್ಷ ಸಂದೀಪ ದೇಸಾಯಿ, ಅ.ಭಾ.ವೀ.ಮ ಸಭಾದ ಮಹಿಳಾ ಜಿಲ್ಲಾಧ್ಯಕ್ಷೆ ಜ್ಯೋತಿ ಮರಗೋಳ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ಮಾಜಿ ಸದಸ್ಯ ಸುರೇಶ ಬಡಿಗೇರ, ಕಾಂಗ್ರೆಸ್ ಮುಖಂಡ ಶರಣ ಅಲ್ಲಮಪ್ರಭು ಪಾಟೀಲ, ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಶಿವಾನಂದ ಹೊನಗುಂಟಿಕರ್, ಕ.ಕ ಸಂಚಾಲಕ ಮನೋಹರ ಜೀರನೂರ, ಜಿಲ್ಲಾ ಅಧ್ಯಕ್ಷ ವಿಶ್ವನಾಥ ಜಿ. ಪಾಟೀಲ, ಕ.ಕ. ವಾಣಿಜ್ಯ ಅಧ್ಯಕ್ಷ ನಾಗರಾಜ ದಮ್ಮೂರ, ಜಿಲ್ಲಾ ಗೌರವಾಧ್ಯಕ್ಷ ಮಂಜುನಾಥ ಕುಸನೂರ, ನಗರ ಅಧ್ಯಕ್ಷ ಶರಣು ದ್ಯಾಮಾ, ತಾಲ್ಲೂಕ ಅಧ್ಯಕ್ಷ ವಿಜಯಕುಮಾರ ಅಂಕಲಗಿ ಸೇರಿದಂತೆ ಕರವೇ ಪದಾಧಿಕಾರಿಗಳು ಇದ್ದರು.

## ವೆಂಕಟೇಶ್ವರ ಕಾಲೋನಿಯಲ್ಲಿ ಒಂದು ಮನೆ ಹಾಗೂ ಬೈಕ್ ಕಳ್ಳತನ; ಸಿಸಿಟಿವಿಯಲ್ಲಿ ದೃಶ್ಯ ಸೆರೆ



**ಚಿತ್ತಾಪುರ; ಡಿ.30–**ಪಟ್ಟಣದ ವೆಂಕಟೇಶ್ವರ ಕಾಲೋನಿಯಲ್ಲಿ ಡಿ.30ರ ರಾತ್ರಿ 3 ಗಂಟೆ ಸುಮಾರಿಗೆ ಮನೆ ಕಳ್ಳತನ ಮಾಡಿರುವ ಘಟನೆ ಜರುಗಿದ್ದು, ಸಿಸಿಟಿವಿಯಲ್ಲಿ ದೃಶ್ಯ ಸೆರೆಯಾಗಿದೆ.ರಮೇಶ ಶರಣಪ್ಪ ಬೋವಿ ಕಾಟಮದೇವರಹಳ್ಳಿಯವರ ಮನೆಯಲ್ಲಿದ್ದ 1 ತೊಲೆ ಬಂಗಾರ, 16 ತೊಲೆ ಬೆಳ್ಳಿ, 1500 ರೂ. ಕಳ್ಳತನವಾಗಿದೆ. ಸುರೇಶ ಸರಾಫ್ ಲಕ್ಷ್ಮಣ ಸರಾಫ್ ಎನ್ನುವವರ ಮನೆಯಲ್ಲಿ ಬಾಡಿಗೆಗೆ ಇದ್ದವರು ಕಳೆದ ಒಂದು ತಿಂಗಳ ಹಿಂದೇಯೆ ಮನೆ ಖಾಲಿ ಮಾಡಿಕೊಂಡು ಹೋಗಿದ್ದು, ಬಾಗಿಲಿನ ಕೀಲಿ ಕೈ ಮುರಿದು ಕಳ್ಳತನಕ್ಕೆ ಯತ್ನಿಸಿದ್ದಾರೆ. ಜಗನ್ನಾಥ ಗುತ್ತೇದಾರ ಚಂದಯ್ಯ ಗುತ್ತೇದಾರ ಎನ್ನುವವರ ಮನೆ ಮುಂದುಗಡೆ ನಿಲ್ಲಿಸಿದ ಪಲ್ಸರ್ ಬೈಕ್ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.ಸುದ್ದಿ ತಿಳಿಯುತ್ತಿದ್ದಂತೆ ಪಿಎಸ್'ಐ ಮಂಜುನಾಥ ರೆಡ್ಡಿ, ಸಿದ್ದು ಮಡಿವಾಳ, ಅನೀಲ್ ಕುಮಾರ ರವಿಕುಮಾರ, ಬೆರಳಚ್ಚು ತಜ್ಞರು, ಶ್ವಾನ ದಳದ ಸಿಬ್ಬಂದಿ ಸೇರಿದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು ಸಿಬ್ಬಂದಿಗಳು ಭೇಟಿ ನೀಡಿ ಪರೀಶಿಲನೆ ನಡೆಸಿದರು.ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪಾಲಿಕ್ಲಿನಿಕ್ ಬೀದರಗೆ ರಾಜ್ಯಮಟ್ಟದ ಅತ್ಯುತ್ತಮ ಪಶುವೈದ್ಯಕೀಯ ಸೇವಾ ಪ್ರಶಸ್ತಿ



**ಬೀದರ, ಡಿ.30–** ಪಶು ಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು ಆಯುಕ್ತಾಲಯದಿಂದ ಆಯೋಜಿಸಲಾಗಿದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ ಅತ್ಯುತ್ತಮ ಪಾಲಿಕ್ಲಿನಿಕ್ ಸ್ಪರ್ದೆಯಲ್ಲಿ ಬೀದರ ಜಿಲ್ಲೆಯ ಪಶು ಇಲಾಖೆಯ ಪಶುವೈದ್ಯಕೀಯ ಪಾಲಿಕ್ಲಿನಿಕ್ (ಜಿಲ್ಲಾ ಪಶು ಆಸ್ಪತ್ರೆ)ಗೆ "ಮೂರನೆಯ" ಅತ್ಯುತ್ತಮ ಪಾಲಿಕ್ಲಿನಿಕ್ ಪ್ರಶಸ್ತಿಯಂದು ಘೋಷಿಸಲಾಗಿದ್ದು. ಸದರಿ ಪ್ರಶಸ್ತಿ ಮತ್ತು ಪ್ರಶಂಸನಾ ಪತ್ರಯನ್ನು ಪಾಲಿಕ್ಲಿನಿಕ್ ಬೀದರನ ಮಾನ್ಯ ಉಪನಿರ್ದೇಶಕರಾದ ಡಾ.ರವಿಂದ್ರಕುಮಾರ ಭೂರೆ ರವರಿಗೆ ನೀಡಿ ಬೆಂಗಳೂರುನಲ್ಲಿ ಗೌರವಿಸಲಾಯಿತು.ರಾಜ್ಯಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆಯ ಮೂಲಕ ನೀಡಲಾದ ಈ ಪ್ರಶಸ್ತಿಯು ಪಾಲಿಕ್ಲಿನಿಕ್ ಬೀದರನ ಮೂಲಸೌಕರ್ಯಗಳು, ಸ್ವಚ್ಚತೆ , ಆಧುನಿಕ ಸೌಲಭ್ಯಗಳು ಹಾಗೂ ವಿವಿಧ ರೋಗಗ್ರಸ್ತ ಪ್ರಾಣಿಗಳ ಗುಣಮಟ್ಟದ ಚಿಕಿತ್ಸೆ/ ಶಸ್ತ್ರಚಿಕಿತ್ಸೆಯನ್ನು ನೀಡುವ ಜೊತೆಗೆ ಸಾರ್ವಜನಿಕರಿಗೆ ನಿರಂತರ ಪಶುವೈದ್ಯಕೀಯ ಸೇವೆಯನ್ನು ಗುರುತಿಸಿ ಈ ಗೌರವವನ್ನು ನೀಡಲಾಗಿದೆ.ಈ ಪ್ರಶಸ್ತಿಗೆ ಪಾಲಿಕ್ಲಿನಿಕ್ ಬೀದರನ ಮುಖ್ಯ ಪಶುವೈದ್ಯರಾದ ಡಾ.ಗೌತಮ ಅರಳಿ, ಡಾ.ನೀಲಕಂಠ ಚನ್ನಶೆಟ್ಟಿ, ಡಾ.ಶ್ರೀಕಾಂತ ಬಿರಾದಾರ ಮತು ಸಿಬ್ಬಂದಿಯವರು ಹರ್ಷ ವ್ಯಕ್ತ ಪಡಿಸಿದರು.

# ಜನವರಿ 3ರಂದು ಜಿಲ್ಲಾಡಳಿತದಿಂದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಯುವಮಾರ್ಗ ಸುದ್ದಿ

**ರಾಯಚೂರು ಡಿ,30–** ಇಲ್ಲಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 2026ರ ಜನವರಿ 3ರ ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ದೇವದುರ್ಗದ ಮೂಲ ಪೀಠದ ವಿಶ್ವಕರ್ಮ ಶ್ರೀಮದ್ ಮದಾನೆಗುಂದಿ ಸರಸ್ವತಿ ಸಂಸ್ಥಾನದ ಶ್ರೀಶ್ರೀ ಮೌನೇಶ್ವರ ಮಹಾಸ್ವಾಮಿಗಳು ದಿವ್ಯಾ ಸಾನಿಧ್ಯ ವಹಿಸಲಿದ್ದಾರೆ.


ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜಿ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಎಸ್.ಆರ್.ಕೆ. ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಪಕರಾದ ಡಾ.ಸವಿತಾ ಪಂಪಾಪತಿ ಬಡಿಗೇರ್ ಅವರು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರಸುದಾರರ ಪತೆಗೆ ರೈಲ್ವೇ ಪೊಲೀಸರ ಮನವಿ

ಯುವಮಾರ್ಗ ಸುದ್ದಿ



**ರಾಯಚೂರು ಡಿ,30–** ಯಾದಗಿರಿ ರೈಲ್ವೇ ನಿಲ್ದಾಣದ ವೇದಿಕೆ ನಂಬರ್ 01 ರಲ್ಲಿ ಡಿಸೆಂಬರ್ 26ರ ಬೆಳಿಗ್ಗೆ 7.10ಗಂಟೆಗೆ ಅಸ್ವಸ್ತಗೊಂಡಿದ್ದ ಅಪರಿಚಿತ ಸುಮಾರು 70 ವರ್ಷದ ಗಂಡಸ್ಸು ಯಾವುದೋ ವಯೋಸಹಜ ಖಾಯಿಲೆಯಿಂದ ಬಳಲಿ ಸ್ವಾಭಾವಿಕವಾಗಿ ಮೃತಪಟ್ಟಿದ್ದು, ಈ ಕುರಿತು ರಾಯಚೂರಿನ ರೈಲ್ವೇ ಠಾಣೆಯಲ್ಲಿ ಯು.ಡಿ.ಆರ್ ನಂ:72/2025 ಯು/ಎಸ್ 194 ಬಿಎನ್‌ಎಸ್‌ಎಸ್ ರಿತ್ಯಾ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ವ್ಯಕ್ತಿಯನ್ನು ಯಾದಗಿರಿಯ ಯೀಮ್ಸ್ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆಗೆ ಸ್ಪಂದಿಸದೇ ಯಾವುದೋ ವಯೋಸಹಜ ಖಾಯಿಲೆಯಿಂದ ಬಳಲಿ ಸ್ವಾಭಾವಿಕವಾಗಿ ಮೃತಪಟ್ಟದ್ದಾರೆ. ಮೃತದೇಹ ದೋರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಆದ್ದರಿಂದ ಮೃತನ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ಮೃತದೇಹಗಳನ್ನು ಯಾದಗಿರಿ ಯೀಮ್ಸ್ ಜಿಲ್ಲಾ ಆಸ್ಪತ್ರೆಯ ಶೀತಲ ಶವಗಾರದಲ್ಲಿ ಇಡಲಾಗಿದೆ.

ಅಪರಿಚಿತ ಗಂಡಸ್ಸು ವಯಸ್ಸು ಸುಮಾರು 70 ವರ್ಷ, ಎತ್ತರ ಸುಮಾರು 5.4 ಅಡಿ, ಉದ್ದ ಮುಖ, ಉದ್ದನೆಯ ಮೂಗು, ಕಪ್ಪು ಕಣ್ಣುಗಳು, ತಲೆಯಲ್ಲಿ 2 ಇಂಚು ಬಿಳಿ ಕೂದಲು, 2 ಇಂಚು ಬಿಳಿ ಗಡ್ಡ ಮೀಸೆ ಬಿಟ್ಟಿದ್ದು, ಬಡುಕಲು ಶರೀರ ಹೊಂದಿರುತ್ತಾನೆ.

ಒಂದು ನೀಲಿ ಬಣ್ಣ ಗೆರೆಯುಳ್ಳ ಮಾಸಿದ ಬಿಳಿಯ ಶರ್ಟು, ಒಂದು ಕಪ್ಪು ಬಣ್ಣದ ಪ್ಯಾಂಟು ಒಂದು ಕೆಂಪು ಮತ್ತು ನೀಲಿ ಬಣ್ಣ ಮಿಶ್ರಿತ ಬಟ್ಟೆಯನ್ನು ಧರಿಸಲಾಗಿದೆ. ಕೈಯಲ್ಲಿ ಒಂದು ಹಳೆಯ ದಾರವನ್ನು ಹೊಂದಲಾಗಿದೆ.

ಈ ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ:08532 231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೆ ಪೊಲೀಸ್ ಠಾಣೆಯು ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಮಹಾನಗರ ಪಾಲಿಕೆ ಅಧಿಕಾರಿ, ಸಿಬ್ಬಂದಿಗೆ ವಿಶೇಷ ಸಾಮರ್ಥ್ಯವೃದ್ಧಿ ತರಬೇತಿ



ಯುವಮಾರ್ಗ ಸುದ್ದಿ

**ರಾಯಚೂರು ಡಿ,30–** ರಾಯಚೂರು ಮಹಾನಗರ ಪಾಲಿಕೆಯ ಆಡಳಿತದ ಗುಣಮಟ್ಟ ಮತ್ತು ಸೇವಾ ವಿತರಣೆಯನ್ನು ಹೊಸ ಮಟ್ಟಕ್ಕೇರಿಸುವ ದಿಶೆಯಲ್ಲಿ ಪಾಲಿಕೆಯ ಎಲ್ಲಾ ಹಂತದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಎರಡು ದಿನದ ವಿಶೇಷ ಸಾಮರ್ಥ್ಯವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಡಿ.30ರಂದು ಚಾಲನೆ ನೀಡಲಾಯಿತು.

ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ನೇತೃತ್ವದಲ್ಲಿ ಡಿಸೆಂಬರ್ 30ರಂದು ನಗರದ ಹಳೆ






ನಗರಸಭೆಯ ಸಭಾಂಗಣದಲ್ಲಿ ತರಬೇತಿಗೆ ಚಾಲನೆ ಸಿಕ್ಕಿತು.

ಅನುಭವಿ ತಜ್ಞರಾದ ಮಂಗಳೂರಿನ ಸಹಾಯಕ ಪ್ರಾಧ್ಯಾಪಕರು & ತರಬೇತುದಾರರಾದ ಡಾ.ನಂದೀಶ್ ವೈ.ಡಿ., ಮತ್ತು ಮೈಸೂರಿನ ಆಡಳಿತ ತರಬೇತುದಾರರಾದ ಡಾ.ಗಂಗಾಧರ ವೈ.ವಿ. ಅವರು ತರಬೇತಿ ನೀಡಿದರು.

ಪಾಲಿಕೆಯ ಕಂದಾಯ ಶಾಖೆ, ಅಡ್ಮಿನ್ ಶಾಖೆ, ಆರೋಗ್ಯ, ಎಂಜಿನಿಯರಿಂಗ್, ಉದ್ಯಾನ, ಲೆಕ್ಕಶಾಖೆ ಹಾಗೂ ಇತರೆ ವಿಭಾಗಗಳ ಸಿಬ್ಬಂದಿಯನ್ನು ಒಳಗೊಂಡು ಎಲ್ಲಾ ಶ್ರೇಣಿಯ ಸಿಬ್ಬಂದಿ ತರಬೇತಿಯಲ್ಲಿ ಭಾಗಿಯಾಗಿದ್ದರು.

## ಸಮಾಜದ ಒಗ್ಗಟ್ಟು ಮತ್ತು ಏಳಿಗೆಗೆ ಯುವಕರು ಶ್ರಮಿಸಬೇಕು : ಸಚಿವ ಸಂತೋಷ ಲಾಡ್



**ಕಾಗವಾಡ : ಡಿ.30–**ಶಕ್ತಿಶಾಲಿ ಸಮುದಾಯಗಳಲ್ಲಿ ಮರಾಠಾ ಸಮಾಜವೂ ಒಂದಾಗಿದೆ. ಶಿಕ್ಷಣ, ಆರ್ಥಿಕ ಮತ್ತು ಸಾಮಾಜಿಕ ಏಳಿಗೆಗೆ ಸಮಾಜ ಬಾಂಧವರು ಒತ್ತು ನೀಡಬೇಕು. ಎಲ್ಲರೂ ಒಗ್ಗೂಡಿ ಸಮಾಜದ ಹಿತಾಸಕ್ತಿಗಳನ್ನು ಕಾಪಾಡಬೇಕು. ಸಮಾಜದ ಯುವಕರು ಒಗ್ಗಟ್ಟಿನಿಂದ ಶ್ರಮಿಸಬೇಕು, ಉದ್ಯೋಗ ಕೌಶಲ್ಯಗಳನ್ನು ಬೆಳೆಸಿಕೊಳ್ಳಿ

ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು

ಅವರು ಕಾಗವಾಡ ತಾಲೂಕಿನ ಕೆಂಪವಾಡ ಗ್ರಾಮದ ಬಳಿಯ ಅಥಣಿ ಶುಗರ್ಸ್ ಆವರಣದಲ್ಲಿ ಮಾಜಿ ಸಚಿವ ಶ್ರೀಮಂತ ಪಾಟೀಲ ನೇತೃತ್ವದಲ್ಲಿ ಅಥಣಿ ಹಾಗೂ ಕಾಗವಾಡ ತಾಲೂಕಿನ ಮರಾಠಾ ಸಮಾಜ ಚಿಂತನ ಸಮಾವೇಶವನ್ನು ಕಾರ್ಮಿಕ ಸಚಿವ ಸಂತೋಷ ಲಾಡ ಅವರು ಶಿವಾಜಿ ಮೂರ್ತಿಗೆ ಪೂಜೆ ಸಲ್ಲಿಸುವ ಮೂಲಕ ಉದ್ಘಾಟಿಸಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು


ಮರಾಠಾ ಸಮಾಜದ ಮುಖ್ಯ ಉದ್ದೇಶ ಸಮಾಜದೊಳಗಿನ ಏಕತೆಯನ್ನು ಬಲಪಡಿಸುವುದು. ಸಮಾಜದ ವಿವಿಧ ವರ್ಗಗಳ ನಡುವೆ ಸಹಕಾರ ಬೆಳೆಸಿ, ಶಿಕ್ಷಣ, ಉದ್ಯೋಗ, ಆರ್ಥಿಕ ಪ್ರಗತಿ ಹಾಗೂ ಸಾಮಾಜಿಕ ಗೌರವವನ್ನು ನಮ್ಮ ಬಾಂಧವರ ಧ್ಯೇಯವಾಗಿದೆ. ಶಿಕ್ಷಣ ಕ್ಷೇತ್ರದಲ್ಲಿ ಮರಾಠಾ ಸಮಾಜ ಸಂಘಟನೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಉಚಿತ ಪಾಠಪುಸ್ತಕಗಳು, ವಸತಿ ಸೌಲಭ್ಯಗಳು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡುವ ಮೂಲಕ ಸಂಘಟನೆಗಳು ಯುವಕರ ಭವಿಷ್ಯವನ್ನು ಬೆಳಗಿಸಬೇಕು. ಶಿಕ್ಷಣವೇ ಸಮಾಜದ ಶಾಶ್ವತ ಅಭಿವೃದ್ಧಿಗೆ ಮೂಲ ಅನ್ನುವ ರೀತಿಯಲ್ಲಿ ಕೆಲಸ ಮಾಡಬೇಕಾಗಿದೆ. ಉದ್ಯೋಗ ಮತ್ತು ಆರ್ಥಿಕ ಕ್ಷೇತ್ರದಲ್ಲಿಯೂ ಮರಾಠಾ ಸಮಾಜ ಬಾಂಧವರು ಸಕ್ರಿಯವಾಗಿ ಪಾಲ್ಗೊಳ್ಳಬೇಕು.

ಸ್ವಯಂ ಉದ್ಯೋಗಕ್ಕೆ ಠಿಜಿಡಿಔತ್ಸಾಹ, ಕೌಶಲ್ಯಾಭಿವೃದ್ಧಿ ತರಬೇತಿಗಳು, ಸಣ್ಣ ಉದ್ಯಮಗಳಿಗೆ ಮಾರ್ಗದರ್ಶನ ನೀಡುವ ಮೂಲಕ ಸಮಾಜದ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ಪ್ರಯತ್ನಿಸುವುದು ಅನಿವಾರ್ಯವಾಗಿದೆ. ಸಾಮಾಜಿಕ ನ್ಯಾಯ ಮತ್ತು ಹಕ್ಕುಗಳ ರಕ್ಷಣೆಯಲ್ಲಿಯೂ ಮರಾಠಾ ಸಮಾಜ ಮುಂಚೂಣಿಗೆ ಬರಬೇಕಿದೆ. ಮರಾಠಾ ಸಮಾಜ ಸಂಘಟನೆಗಳು ಸಮಾಜದ ಶಕ್ತಿಯನ್ನು ಏಕಾಗ್ರತೆಗೊಳಿಸಿ, ಅಭಿವೃದ್ಧಿಯ ದಾರಿಯಲ್ಲಿ ಮುನ್ನಡೆಸುವ ಸೇತುವೆಗಳಾಗಬೇಕು. ಸಂಘಟನೆಗಳ ಮೂಲಕ ಏಕತೆ, ಶಿಕ್ಷಣ, ಆರ್ಥಿಕ ಪ್ರಗತಿ ಮತ್ತು ಸಾಮಾಜಿಕ ನ್ಯಾಯವನ್ನು ಸಾಧಿಸಿದರೆ, ಮರಾಠಾ ಸಮಾಜವು ಇನ್ನಷ್ಟು ಬಲಿಷ್ಠವಾಗಿ ರಾಷ್ಟ್ರದ ಪ್ರಗತಿಗೆ ತನ್ನದೇ ಆದ ವಿಶಿಷ್ಟ ಕೊಡುಗೆಯನ್ನು ನೀಡುವುದರಲ್ಲಿ ಸಂಶಯವಿಲ್ಲ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಕರೆ ನೀಡಿದರು.

ಶೂರತೆ, ದೇಶಭಕ್ತಿ, ಶ್ರಮ ಸಂಸ್ಕೃತಿ ಮತ್ತು ಸಾಮಾಜಿಕ ನ್ಯಾಯದ ಹೋರಾಟ ಮರಾಠಾ ಸಮಾಜದ ಧ್ಯೇಯವಾಗಿದೆ. ಇಂತಹ ಮಹತ್ವದ ಸಮಾಜವನ್ನು ಒಗ್ಗೂಡಿಸಿ, ಅದರ ಹಿತಾಸಕ್ತಿಗಳನ್ನು ಕಾಪಾಡಲು ಹಾಗೂ ಅಭಿವೃದ್ಧಿಗೆ ದಿಕ್ಕು ನೀಡಲು ಸಮಾಜವು ಒಗ್ಗಟ್ಟಾದರೆ ಆರ್ಥಿಕ ಸಾಮಾಜಿಕ ಮತ್ತು ಶೈಕ್ಷಣಿಕ ಪ್ರಗತಿ ಸಾಧಿಸಿದರೆ ಗುರಿಯತ್ತ ಸಾಗಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಶ್ರೀಮಂತ ಪಾಟೀಲ, ಮರಾಠ ಸಮಾಜದ ಮುಖಂಡರಾದ ಅಪ್ಪಾಸಾಹೇಬ ಅವತಾಡೆ, ದಿಗ್ವಿಜಯಸಿಂಗ ಪವಾರದೇಸಾಯಿ ಮತ್ತು ನ್ಯಾಯವಾದಿ ಮೋರೆ ಮಾತನಾಡಿದರು.ಸಮಾವೇಶದಲ್ಲಿ ಉಜ್ವಸಿಂಗ ಪವಾರದೇಸಾಯಿ, ವಿಕ್ರಾಂತ ಪವಾರದೇಸಾಯಿ, ಭಾವುಸಾಹೇಬ ಜಾಧವ, ಸಿದ್ದು ಪಾಟೀಲ, ನಾನಾಸಾಹೇಬ ಅವತಾಡೆ, ಅಬಾಸಾಹೇಬ ಚವ್ಹಾಣ, ಸಂದೀಪ ಪಾಟೀಲ, ಪ್ರಭಾಕರ ಚವ್ಹಾಣ, ಸಚಿನ್ ದೇಸಾಯಿ, ವಿನಾಯಕ ಸಿಂಧೆ ಸೇರಿದಂತೆ ಸಾವಿರಾರು ಜನ ಮರಾಠಾ ಸಮಾಜ ಬಾಂಧವರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು ಉಪಸ್ಥಿತರಿದ್ದರು.

## ಅಂಬೇಡ್ಕರ್ ಸಂಘದ ಆಯ್ಕೆ ವಿವಾದ ಬಗೆಹರಿಸಲು ಡಿಸಿಗೆ ಮನವಿ



**ಬಳ್ಳಾರಿ,ಡಿ.30–** ಇಲ್ಲಿನ ಬಳ್ಳಾರಿ ಜಿಲ್ಲಾ ಡಾ॥ ಬಿ.ಆರ್.ಅಂಬೇಡ್ಕರ್ ಸಂಘದ ನೂತನ ಆಡಳಿತ ಮಂಡಳಿಯ ಆಯ್ಕೆಯ ಪ್ರಕ್ರಿಯೆಯು ಸರ್ವ ಸದಸ್ಯರನ್ನು ಹೊರಗಿಟ್ಟು ಕಾನೂನು ಬಾಹಿರವಾಗಿ ಕೇವಲ 14 ಜನರು ಸೇರಿಕೊಂಡು, ಪದಾಧಿಕಾರಿಗಳನ್ನು ಆಯ್ಕೆ ಮಾಡಿರುವುದನ್ನು ರದ್ದುಗೊಳಿಸಿ ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ.

ದಲಿತ ಮುಖಂಡ ಟಿ.ಪಂಪಾಪತಿ ನೇತೃತ್ವದ ತಂಡ ಡಿಸಿಯವರಿಗೆನವಿ ನೀಡಿ. ಕಳೆದ ಡಿ.17 ರಂದು ಆಯ್ಕೆ ಮಾಡಿರುವ ನೂತನ ಪದಾಧಿಕಾರಿಗಳನ್ನು ಸಿಂದುಗೊಳಿಸಲು ಸಹಕಾರ ಸಂಘಗಳ ಉಪನಿಬಂಧಕರಿಗೆ ಸೂಚಿಸುವಂತೆ ಮನವಿ ಪತ್ರ ಸಲ್ಲಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H